# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 43 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 28–08–2024 ಬುಧವಾರ | ಪುಟ: 4 | ಬೆಲೆ : ರೂ.2–00
Volume - 02 Issue - 43 | Title- Code: KARKAN 28269 | Chitradurga | Date: 28-08-2024 Wednesday | Page: 4 | Price: Rs. 2-00

ಒಳಪುಟದ ಸುದ್ದಿಗಳು
ನಾಟ್ಯ ನೈದಿಲೆ ನೃತ್ಯೋತ್ಸವಕ್ಕೆ ವೈಭವದ ಚಾಲನೆ 2
ಗೆಜೆಟೆಡ್ ಪ್ರೊಬೆಷನರ್ಸ್ ಸ್ಪರ್ಧಾತ್ಮಕ ಪರೀಕ್ಷೆ ಜಿಲ್ಲೆಯಲ್ಲಿ ಸುಗಮ, ಶಾಂತಿಯುತ 3
ಯಾವುದೇ ನಿಯಮ ರೂಪಿಸಿದರೂ, ಮಕ್ಕಳು ಪರೀಕ್ಷೆ ಎದುರಿಸುವಂತೆ ಅಣಿಗೊಳಿಸಬೇಕು 4

ಸುದ್ದಿ, ಜಾಹಿರಾತಿಗೆ
9686622252

## ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ, ಗುಣ ನೋಡಿ ಗೆಳೆತನ ಮಾಡು , ಯಾಕೆಂದರೆ ಬಟ್ಟೆ ಹರಿದು ಹೋಗುವ ತನಕ ಮಾತ್ರ ಇರುತ್ತದೆ, ಗುಣ ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಸಂಸದ ಗೋವಿಂದ ಎಂ ಕಾರಜೋಳ ಸೂಚನೆ

# ಗಣಿ ಕಂಪನಿಗಳ ಸಿಎಸ್ಆರ್ ನಿಧಿ: ಜಿಲ್ಲೆಯ ಬಾಧಿತ ಪ್ರದೇಶಾಭಿವೃದ್ಧಿಗೇ ಬಳಕೆಯಾಗಲಿ

» ಚಿತ್ರದುರ್ಗ

ಜಿಲ್ಲೆಯಲ್ಲಿರುವ ಗಣಿ ಕಂಪನಿಗಳು ಸ್ಥಳೀಯ ಜನರಿಗೆ ಉದ್ಯೋಗ ಅವಕಾಶ ನೀಡುವ ಜೊತೆಗೆ ಜಿಲ್ಲೆಯಲ್ಲಿನ ಗಣಿಬಾಧಿತ ಪ್ರದೇಶಾಭಿವೃದ್ಧಿಗೆ ಕೊಡುಗೆ ನೀಡಬೇಕು. ಸಿಎಸ್ಆರ್ ನಿಧಿ ಜಿಲ್ಲೆಯ ಗಣಿಬಾಧಿತ ಪ್ರದೇಶಗಳಲ್ಲಿಯೇ ಖರ್ಚಾಗಬೇಕು ಎಂದು ಸಂಸದ ಗೋವಿಂದ ಎಂ ಕಾರಜೋಳ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಅಧಿಕಾರಿಗಳು ಹಾಗೂ ಗಣಿ ಕಂಪನಿಗಳ ಪ್ರತಿನಿಧಿಗಳೊಂದಿಗೆ ಹಮ್ಮಿಕೊಂಡಿದ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ 7 ಖಾಸಗಿ ಗಣಿ ಕಂಪನಿಗಳು ಕಾರ್ಯ ನಿರ್ವಹಿಸುತ್ತಿದ್ದು, ಗಣಿ ಕಂಪನಿಗಳ ಸಿ.ಆರ್.ಆರ್ (ಸಾಮಾಜಿಕ ಹೊಣೆಗಾರಿಕೆ) ನಿಧಿ ಜಿಲ್ಲೆಯ ಗಣಿಬಾಧಿತ ಪ್ರದೇಶಗಳಲ್ಲಿ ಬಳಕೆಯಾಗಬೇಕು. ಆದರೆ ಇದು ಆಗುತ್ತಿಲ್ಲ. ಗಣಿ ಕಂಪನಿಗಳು ತಮ್ಮ ವ್ಯಾಪ್ತಿಯ ಇತರೆ ರಾಜ್ಯಗಳಲ್ಲಿ ಸಿಎಸ್ಆರ್ ಹಣ ಖರ್ಚು ಮಾಡಿ, ಇಲ್ಲಿನ ಲೆಕ್ಕಕ್ಕೆ ತೋರಿಸುತ್ತಿರುವುದು ಹಾಗೂ ಕಂಪನಿಗಳೇ ಎನ್‌ಜಿಒ ಗಳನ್ನು ಸೃಷ್ಟಿಸಿ, ತಮಗೆ ಬೇಕಾದ ಏಜೆನ್ಸಿಗಳಿಗೆ ಹಣ ನೀಡುತ್ತಿರುವುದಾಗಿ ಸಾಕಷ್ಟು ದೂರುಗಳು ಬಂದಿದ್ದು, ರಸ್ತೆಗಳು ಹಾಳಾಗಿವೆ, ಮೈನ್ಸ್ ಲಾರಿಗಳ ಸಂಚಾರದಿಂದ ಮನೆಗಳಲ್ಲಿ ಧೂಳು ತುಂಬಿಕೊಂಡು ಬದುಕು ದುಸ್ತರವಾಗಿದೆ ಎಂದು ಸ್ಥಳೀಯರಿಂದ ರಸ್ತೆ ಬಂದ್ ಸಹ ಮಾಡಲಾಗಿದೆ. ಇದರ ಜೊತೆಗೆ ನೀರಿನ ಮೂಲಗಳಾದ ಕೆರೆ ಕಟ್ಟೆಗಳೂ ಕೂಡ ಮಲಿನವಾಗಿವೆ ಎಂದು ಜನರು ಅಳಲು ತೋಡಿಕೊಂಡಿದ್ದಾರೆ. ಇಲ್ಲಿನ ಸಂಪನ್ಮೂಲ ಬಳಕೆ ಮಾಡಿಕೊಂಡು, ಇಲ್ಲಿನ ಜನರಿಗೆ ಅನುಕೂಲ ಮಾಡಿಕೊಡದೆ ಅನಾನುಕೂಲವನ್ನೇ ಹೆಚ್ಚು ಮಾಡಿದರೆ ಸಹಿಸಲು ಸಾಧ್ಯವಿಲ್ಲ. ಹಾಗಾಗಿ ಗಣಿ ಕಂಪನಿಗಳು ಸ್ಥಳೀಯ ಜನರಿಗೆ ಮೂಲ ಸೌಕರ್ಯ ಒದಗಿಸುವ ಮೂಲಕ ಉತ್ತಮ ಕೆಲಸಕ್ಕೆ ಸಹಕಾರ ನೀಡಬೇಕು ಎಂದು ಹೇಳಿದರು. ಇದಕ್ಕೆ ದನಿಗೂಡಿಸಿದ ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು, ಸಿಎಸ್ಆರ್ ನಿಧಿಯನ್ನು ಕಾರ್ಪೋರೇಟ್ ಕಂಪನಿಗಳು ತಮ್ಮ ಕಾರ್ಯಕ್ಷೇತ್ರದಲ್ಲಿನ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹಾಗೂ ಪರಿಸರ ಸಂರಕ್ಷಣೆ ಕಾರ್ಯಗಳಿಗೆ ಕಡ್ಡಾಯವಾಗಿ ಸ್ಥಳೀಯವಾಗಿಯೇ ಖರ್ಚು ಮಾಡಬೇಕು ಎಂಬುದಾಗಿ ಸರ್ಕಾರ ಇತ್ತೀಚೆಗಷ್ಟೇ ಕಟ್ಟುನಿಟ್ಟಿನ ಸೂಚನೆ ನೀಡಿದೆ ಎಂದರು.

ಗಣಿ ಕಂಪನಿಗಳು ಜಿಲ್ಲೆಯ ಗಣಿಬಾಧಿತ ಪ್ರದೇಶಗಳಲ್ಲಿ ಶಾಲೆ, ಕಾಲೇಜು, ಅಂಗನವಾಡಿ, ಆಸ್ಪತ್ರೆ, ರಸ್ತೆಗಳು ಸೇರಿದಂತೆ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ಹಾಗೂ ಪರಿಸರ ಸಂರಕ್ಷಣೆಗೆ ಕ್ರಮ ವಹಿಸಬೇಕು ಎಂದು ಗಣಿ ಕಂಪನಿಗಳ ಪ್ರತಿನಿಧಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ ಅವರು, ಸಿ.ಎಸ್ಆರ್ ನಿಧಿಯಡಿಯಲ್ಲಿ ಇದುವರೆಗೂ ಯಾವ ಕಾರ್ಯಗಳಿಗೆ ಎಷ್ಟು ಖರ್ಚು ವೆಚ್ಚ ಮಾಡಲಾಗಿದೆ, ಪರಿಸರ ಸಂರಕ್ಷಣೆ ಹಾಗೂ ಸ್ಥಳಿಕರಿಗೆ ಉದ್ಯೋಗ ನೀಡಿರುವ ಬಗ್ಗೆಯೂ ಮಾಹಿತಿ ನೀಡಬೇಕು. ಇದರ ಜೊತೆಗೆ ಕಂಪನಿಗಳು ಸಿಎಸ್ಆರ್ ನಿಧಿಯಡಿ ಮುಂದೆ ಕೈಗೊಳ್ಳಲಾಗುವ ಕಾರ್ಯಗಳ ಕ್ರಿಯಾ ಯೋಜನೆ ಬಗ್ಗೆ ಮಾಹಿತಿ ನೀಡುವಂತೆ ಸೂಚಿಸಿದರು.

ಗಣಿ ಕಂಪನಿಗಳು ಕೆಲವೆಡೆ ಅಂಗನವಾಡಿ, ಶಾಲಾ ಕಟ್ಟಡಗಳನ್ನು ನಿರ್ಮಾಣ ಮಾಡಿದ್ದಾರೆ, ಆದರೆ ಆ ಸ್ಥಳದಲ್ಲಿ ಅದರ ಅಗತ್ಯತೆ ಮತ್ತು ಉಪಯುಕ್ತತೆ ಬಗ್ಗೆ ಜಿಲ್ಲಾಡಳಿತದ ಗಮನಕ್ಕೆ ತಾರದೆ ಮಾಡಿರುವುದರಿಂದ ಕೆಲವೆಡೆ ಸಮಸ್ಯೆಯಾಗಿದೆ. ಹೀಗಾಗಿ ಕಂಪನಿಗಳು ಎಲ್ಲಿ,ಯಾವಕಾರ್ಯಗಳನ್ನುಕೈಗೊಳ್ಳಬೇಕು ಎಂಬುದನ್ನು ಸಂಬಂಧಿಸಿದ ಇಲಾಖಾ ಅಧಿಕಾರಿಗಳ ಗಮನಕ್ಕೆ ತರಬೇಕು ಹಾಗೂ ಕಂಪನಿಗಳು ತಾವು ಸಿಎಸ್ಆರ್ ನಿಧಿಯಡಿ ಕೈಗೊಳ್ಳುವ ಕಾರ್ಯ ಚಟುವಟಿಕೆಗಳ ಬಗ್ಗೆ ಸಂಬಂಧಿಸಿದ ಕ್ಷೇತ್ರವ್ಯಾಪ್ತಿಯ ಶಾಸಕರು, ಸಂಸದರು, ಸಚಿವರುಗಳ ಗಮನಕ್ಕೆ ತರುವ ಕಾರ್ಯ ಮಾಡಬೇಕು ಎಂದು ಸೂಚನೆ ನೀಡಿದರು.

15 ಸಾವಿರ ಎಕರೆಯಷ್ಟು ಸೋಲಾರ್ ಪಾರ್ಕ್ ಇದೆ. 2016 ರಿಂದ ಸೋಲಾರ್ ಪಾರ್ಕ್‌ಗಳು ಪ್ರಾರಂಭ ಮಾಡಲಾಗಿದ್ದು, ಅಲ್ಲಿಯೂ ಕೂಡ ಸಿ.ಎಸ್.ಆರ್ ನಿಧಿ ಬಳಕೆಯಾಗಬೇಕಿದೆ. ಸುಮಾರು 36 ಕೋಟಿ ಸಿ.ಎಸ್.ಆರ್ ನಿಧಿ ಬರಬೇಕಿದ್ದು, ಅದನ್ನು ಆಯಾ ಪ್ರದೇಶ, ಊರುಗಳಲ್ಲಿ ಖರ್ಚು ಮಾಡಲು ಕ್ರಿಯಾಯೋಜನೆ ರೂಪಿಸಲಾಗುವುದು ಎಂದು ತಿಳಿಸಿದ ಅವರು, ಸಿ.ಎಸ್.ಆರ್.ನಿಧಿಯು ಹೆಚ್ಚಿನ ಜನರಿಗೆ ಉಪಯೋಗವಾಗುವ ನಿಟ್ಟಿನಲ್ಲಿ ಕ್ರಮವಹಿಸಲಾಗುವುದು ಎಂದು ಸಂಸದರು ತಿಳಿಸಿದರು.

ಸಿ.ಎಸ್.ಆರ್. ನಿಧಿ ಬಳಕೆಗೆ ಮುನ್ನ ಕ್ರಿಯಾಯೋಜನೆ ರೂಪಿಸಿ, ಜಿಲ್ಲಾಧಿಕಾರಿಗಳಿಂದ ಅನುಮೋದನೆ ಪಡೆದು ನಂತರ ಸಿ.ಎಸ್.ಆರ್.ನಿಧಿ ಬಳಕೆ ಮಾಡುವುದು ಕಡ್ಡಾಯ ಎಂದು ಸಂಸದ ಗೋವಿಂದ ಎಂ ಕಾರಜೋಳ ತಿಳಿಸಿದರು.

ಪ್ರಕೃತಿ ವಿಕೋಪದ ಸಂದರ್ಭದಲ್ಲಿ ಜಿಲ್ಲೆಯ ಗಣಿ ಕಂಪನಿಗಳು ನೆರವಿಗೆ ಧಾಮಿಸುವ ಮೂಲಕ ಅಗತ್ಯ ಸಹಕಾರ ನೀಡಬೇಕು. ಇತ್ತೀಚೆಗೆ ಓಬಣ್ಣನಹಳ್ಳಿ ಗ್ರಾಮದಲ್ಲಿ ಹೆಚ್ಚಿನ ಮಳೆಯಿಂದ ಜನರು ಸಂಕಷ್ಟಕ್ಕೆ ಸಿಲುಕಿದರು, ಇಂತಹ ಸಂದರ್ಭದಲ್ಲಿ ಗಣಿ ಕಂಪನಿಗಳು ವಿಶಾಲ ಮನಸ್ಸಿನಿಂದ ಮುಂದೆ ಬಂದು ಸಹಾಯ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್. ಜೆ.ಸೋಮಶೇಖರ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಗಣಿ ಮತ್ತು ಭೂ ವಿಜ್ಞಾನ ಇಲಾಖೆ ಉಪನಿರ್ದೇಶಕ ಡಾ.ಎಂ.ಜೆ.ಮಹೇಶ್, ಉಪ ಅರಣ್ಯ ಸಂರಕ್ಷಣಾಧಿಕಾರಿ ರಾಜಣ್ಣ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಡಿವೈಎಸ್‌ಪಿ ದಿನಕರ್, ಪ್ರಾದೇಶಿಕ ಸಾರಿಗೆ ಅಧಿಕಾರಿ ಭರತ್ ಎಂ ಕಾಳೇಸಿಂಘೆ ಸೇರಿದಂತೆ ಗಣಿ ಕಂಪನಿಗಳ ಪ್ರತಿನಿಧಿಗಳು ಇದ್ದರು.



### ಏಕಲವ್ಯ ಶಾಲೆ, ವಿಜ್ಞಾನ ಕೇಂದ್ರ ಮಂಜೂರು

ಜಿಲ್ಲೆಯಲ್ಲಿ ಏಕಲವ್ಯ ಶಾಲೆ ಸ್ಥಾಪನೆಗಾಗಿ ಭಾರತ ಸರ್ಕಾರ ಪರಿಶಿಷ್ಟ ವರ್ಗಗಳ ಮಂತ್ರಾಲಯವು ಮುಂದಾಗಿದ್ದು, ಇದಕ್ಕಾಗಿ ತುರ್ತಾಗಿ 15 ಎಕರೆ ಜಮೀನು ಮಂಜೂರಾತಿ ಆದಷ್ಟು ಬೇಗ ವ್ಯವಸ್ಥೆ ಮಾಡಬೇಕು. ಇದರ ಜೊತೆಗೆ ಚಿತ್ರದುರ್ಗ ಜಿಲ್ಲಾ ಕೇಂದ್ರದಲ್ಲಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರವನ್ನು ಕೆಎಂಇಆರ್‌ಸಿ ನಿಧಿಯಡಿ ಸುಮಾರು 15 ಕೋಟಿ ರೂ. ವೆಚ್ಚದಲ್ಲಿ ಸ್ಥಾಪಿಸಲಾಗುತ್ತಿದ್ದು, ಇದಕ್ಕಾಗಿ ಕನಿಷ್ಟ 2 ರಿಂದ 5 ಎಕರೆ ಜಾಗ ಗುರುತಿಸಿ, ಮಂಜೂರಾತಿ ನೀಡಲು ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅವರಿಗೆ ಸಂಸದ ಗೋವಿಂದ ಎಂ.ಕಾರಜೋಳ ಸೂಚನೆ ನೀಡಿದರು.

### 157 ಹಳ್ಳಿಗಳ ಸೇರ್ಪಡೆಗೆ ಪ್ರಸ್ತಾವನೆ

ಜಿಲ್ಲೆಯಲ್ಲಿ ಗಣಿ ಬಾಧಿತ ಪ್ರದೇಶಗಳಲ್ಲಿ ಪೂರಕ ಅಭಿವೃದ್ಧಿ ಕಾರ್ಯಕ್ರಮಗಳನ್ನು ಡಿಎಂಎಫ್ ಹಾಗೂ ಕೆಎಂಇಆರ್‌ಸಿ ನಿಧಿಯಡಿ ಕೈಗೊಳ್ಳಲಾಗುತ್ತಿದೆ. ಜಿಲ್ಲೆಯಲ್ಲಿ ಈಗಾಗಲೆ 157 ಹಳ್ಳಿಗಳ ಪಟ್ಟಿಯನ್ನು ಮಾಡಿ, ಗಣಿಬಾಧಿತ ಪ್ರದೇಶ ವ್ಯಾಪ್ತಿಗೆ ಸೇರ್ಪಡೆಗೊಳಿಸುವ ಸಲುವಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ. ವೆಂಕಟೇಶ್ ಅವರು ಹೇಳಿದರು.

## ಫಾಸ್ಟ್ ನ್ಯೂಸ್

### ಅತ್ಯಾಚಾರ ಖಂಡಿಸಿ ಪ್ರತಿಭಟನೆ



» ಚಿತ್ರದುರ್ಗ

ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕಿನ ರಂಗನಪಲೆಯಲ್ಲಿ ಹಿಂದೂ ಭೋವಿ ವಡ್ಡರ ದಲಿತ ಸಮುದಾಯದ ಯುವತಿ ಮೇಲೆ ಅತ್ಯಾಚಾರ ಖಂಡಿಸಿ ಕರ್ನಾಟಕ ರಾಜ್ಯ ಭೋವಿ (ವಡ್ಡರ) ಮಹಾಸಭಾ (ರಿ)ದಿಂದ ನಗರದಲ್ಲಿ ಪ್ರತಿಭಟನೆ ನಡೆಸಿತು. ಕರ್ನಾಟಕ ಭೋವಿ ವಡ್ಡರ ಇವರ ಮಹಾಸಭಾದ ಜಿಲ್ಲಾಧ್ಯಕ್ಷ ವೆಂಕಟೇಶ್ ಹೆಚ್. ಮತ್ತು ಮಹಿಳಾ ಜಿಲ್ಯಾಧ್ಯಕ್ಷೆ ಗೀತಾ ಗೋವಿಂದರಾಜು ಇವರ ನೇತೃತ್ವದಲ್ಲಿ ಚಿತ್ರದುರ್ಗ ಜಿಲ್ಲಾ ಮಹಿಳಾ ಮತ್ತು ಪುರುಷರ ಜಂಟಿ ಸಮಿತಿಗಳ ಅಧ್ಯಕ್ಷರುಗಳ ಸಾರಥ್ಯದಲ್ಲಿ ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕಿನ ರಂಗನಪಳ್ಳಿಯಲ್ಲಿ ಯುವತಿಯ ಮೇಲೆ ಆದ ಅತ್ಯಾಚಾರ ಮಾಡಿರುವ ಆರೋಪಿಗಳನ್ನು ಅವರನ್ನು ಬಂಧಿಸಿ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

### ಕಾಮಗಾರಿ ಪೂರ್ಣಗೋಳಿಸುವಂತೆ ರೈತ ಸಂಘ ಪ್ರತಿಭಟನೆ



» ಪರಶುರಾಂಪುರ

ಹೋಬಳಿ ವ್ಯಾಪ್ತಿಯದ ಓಡ್ಡಚೆಲ್ಲೂರುಗ್ರಾಪಂಯ ಮುಜರೆಗ್ರಾಮವಾದ ಹೊನ್ನಯ್ಯನರೋಪ್ಪಗ್ರಾಮದಲ್ಲಿ ಮಂಗಳವಾರ ಅಥ9ಕ್ಕೆ ನಿಂತಅಂಗನವಾಡಿಕಟ್ಟಡಕಾಮಗಾರಿ ಪೂರ್ಣಗೋಳಿಸುವಂತೆ ಅಖಂಡಕರ್ನಾಟಕರಾಜ್ಯರೈತ ಸಂಘದಕಾರ್ಯಕರ್ತರು ಪ್ರತಿಭಟನೆ ನಡೆಸಿದರು. 2015–16ನೇ ಸಾಲಿನಲ್ಲಿ ಮಂಜೂರಾದಅಂಗನವಾಡಿಕಟ್ಟಡಕಾಮಗಾರಿ ಮುಕ್ಕಾಲು ಭಾಗದ ಕೆಲಸವಾಗಿದ್ದು ಇನ್ನುಳಿದ ಕಾಮಗಾರಿಆಗದೆ ಉಳಿದ್ದು ಇದರಿಂದ ಪುಟಾಣಿ ಮಕ್ಕಳಿಗೆ ತೋಂದರೆಅನುಭವಿಸುವಂತಾಗಿತ್ತು. ಈ ವೇಳೆ ರೈತ ಸಂಘದತಾಲೂಕಾಧ್ಯಕ್ಷಚಿಕ್ಕಣ್ಣ ಮಾತನಾಡಿ,ಈ ಭಾಗದಲ್ಲಿತಂಗುದಾಣ, ಅಂಗನವಾಡಿಕಾಮಗಾರಿ, ರಸ್ತೆ ಸೇರಿದಂತೆಇನ್ನಿತರ ಹೋಕ್ಕತ್ತಾಯಗಳ ಬಗ್ಗೆ ಸಂಬಂಧಪಟ್ಟಂತಹಇಲಾಖೆಯವರುತುರ್ತಾಗಿಕಾಮಗಾರಿಗೆ ಚಾಲನೆ ನೀಡಬೇಕು ಹಾಗೂ ಸ್ಥಳಕ್ಕೆ ಅಧಿಕಾರಿಗಳು ಬರಬೇಕುಎಂದು ಒತ್ತಾಯಿಸಿ ಪ್ರತಿಭಟನೆ ನಡೆಸಿದರು. ಪ್ರಧಾನ ಕಾರ್ಯದರ್ಶಿ ಚೌಳೂರು ಪ್ರಕಾಶ್ ಮಾತನಾಡಿ,ಅಧಿಕಾರಗಳು ಇದಕ್ಕೆಉತ್ತರ ನೀಡಬೇಕುಇಲ್ಲವಾದಲ್ಲಿ ಸ್ಥಳದಲ್ಲಿ ಸಂಬಂಧ ಪಟ್ಟ ಅಧಿಕಾರಿಗಳ ತಂಡ ಬರಬೇಕುಎಂದು ಒತ್ತಾಯಿಸಿದರು.

ವಿಷಯ ತಿಳಿದು ಸ್ಥಳಕ್ಕೆ ಆಗಮಿಸಿದ ಪಿಆರ್ ಡಿ ಎಇಇ ಕಾವ್ಯಕಾಮಗಾರಿ ವೀಕ್ಷಣೆ ಮಾಡಿದ ಬಳಿಕ ರೈತ ಸಂಘದವರ ಮಾತನಾಡಿಇನ್ನೋಂದು ತಿಂಗಳಲ್ಲಿ ಪೂರ್ಣಗೋಳಿಸಿಕೋಡಲಾಗುವುದು ಎಂದು ಭರವಸೆ ನೀಡಿದರು.ಸಂದರ್ಭದಲ್ಲಿ ಪ್ರತಿಭಟನೆಯನ್ನ ಹಿಂಪಡೆದರು. ಈ ವೇಳೆಯಲ್ಲಿ ಅಖಂಡಕರ್ನಾಟಕರಾಜ್ಯರೈತ ಸಂಘ ಅಧ್ಯಕ್ಷಚಿಕ್ಕಣ್ಣ, ಪದಾಧಿಕಾರಿಗಳಾದ ಜಂಪಣ್ಣ, ಖಾದರ್ ಭಾಷಾ, ನವೀನ್‌ಗೌಡ,ಕೋಡ್ಲಿ ಪರಮೇಶ್ವರಪ್ಪ, ಶಂಕರಪ್ಪ, ತಿಮ್ಮಣ್ಣ,ಹೋನ್ನಪ್ಪ,ನಾಗೇಂದ್ರಪ್ಪ,ಋಶೇಭದ್ರಪ್ಪ,ರಜಾಕ್,ಗೆಂಡೆತಿಮ್ಮಣ್ಣ, ಮಂಜುನಾಥ್, ಬಸವರಾಜು, ಸಿಬ್ಬಂದಿ ಸೇರಿದಂತೆಇನ್ನಿತರರುಇದ್ದರು.

## ಪ್ರಮುಖ ಸುದ್ದಿ

# ದೇಶದಲ್ಲಿ 10 ಕೋಟಿ ಬಿಜೆಪಿ ಸದಸ್ಯರನ್ನಾಗಿ ಮಾಡುವ ಗುರಿ

» ಚಿತ್ರದುರ್ಗ

ಮುಂದಿನ ಅಕ್ಟೋಬರ್‌ನಲ್ಲಿ ಜಿ.ಪಂ. ಮತ್ತಯ ತಾ.ಪಂ. ಚುನಾವಣೆಗಳು ಬರಲಿವೆ, ಇದಕ್ಕೆ ಪೂರಕವಾಗಿ ನಮ್ಮ ಪಕ್ಷ ಸದಸ್ಯತ್ವ ಅಭಿಯಾನವನ್ನು ಪ್ರಾರಂಭ ಮಾಡಿದೆ. ಇದರ ಪ್ರಯೋಜನ ಪಡೆಯುವುದರ ಮೂಲಕ ಮತದಾರರಿಗೆ ಕೇಂದ್ರ ಸರ್ಕಾರದ ಸಾಧನೆ ಮತ್ತು ಯೋಜನೆಗಳನ್ನು ತಿಳಿಸುವ ಕಾರ್ಯವನ್ನು ಮಾಡುವಂತೆ ಲೋಕಸಭಾ ಸದಸ್ಯರು, ಹಾಗೂ ಮಾಜಿ ಉಪಮುಖ್ಯಮಂತ್ರಿಗಳಾದ ಗೋವಿಂದ ಎಂ. ಕಾರಜೋಳರವರು ಪಕ್ಷದ ಕಾರ್ಯಕರ್ತರಿಗೆ ಕರೆ ನೀಡಿದರು.

ಚಿತ್ರದುರ್ಗ ನಗರದ ದಾವಣಗೆರೆ ರಸ್ತೆಯಲ್ಲಿನ ಜಗಲೂರು ಮಹಾಲಿಂಗಪ್ಪ ಕಂಫರ್ಟ್ಸ್‌ನಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಭಾರತೀಯ ಜನತಾ ಪಾರ್ಟಿಯ ಸದಸ್ಯತಾ ಅಭಿಯಾನ–2024ರ ಜಿಲ್ಲಾ ಕಾರ್ಯಗಾರದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಈ ವರ್ಷ ಇಡಿ ದೇಶದಲ್ಲಿ 10 ಕೋಟಿ ಸದಸ್ಯರನ್ನಾಗಿ ಮಾಡುವ ಗುರಿಯನ್ನು ಬಿಜೆಪಿ ಹೊಂದಿದೆ. ಪ್ರತಿ ಬೂತ್‌ನಲ್ಲಿ ಕನಿಷ್ಠ 300 ಜನರನ್ನು ಸದಸ್ಯರನ್ನಾಗಿ ಮಾಡಬೇಕಿದೆ ಎಂದು ರಾಷ್ಟ್ರೀಯ ಅಧ್ಯಕ್ಷರು ಸೂಚನೆಯನ್ನು ನೀಡಿದ್ದಾರೆ. ಚಿತ್ರದುರ್ಗ ಜಿಲ್ಲೆಯಲ್ಲಿಯೂ ಸಹಾ ಪಕ್ಷದ ಮುಖಂಡರು ಕಾರ್ಯಕರ್ತರು ಸೇರಿ ಈ ಸದಸ್ಯತ್ ಅಭಿಯಾನವನ್ನು ಮಾಡಬೇಕಿದೆ.



ಮುಂದಿನಕೆಲವೇತಿಂಗಳಲ್ಲಿಕಾರ್ಯಕರ್ತರ ಚುನಾವಣೆಗಳಾದ ಜಿ.ಪಂ. ಮತ್ತು ತಾ,ಪಂ ಚುನಾವಣೆಗಳು ಬರಲಿದೆ ಈ ಹಿನ್ನಲೆಯಲ್ಲಿ ಸದಸ್ಯತ್ವ ಅಭಿಯಾನವನ್ನು ಇದಕ್ಕೆ ಬಳಕೆ ಮಾಡಿಕೊಂಡು ಮತದಾರರಿಗೆ ಕೇಂದ್ರದ ಯೋಜನೆ ಹಾಗೂ ಸಾಧನೆಗಳನ್ನು ತಿಳಿಸುವ ಕಾರ್ಯವನ್ನು ಮಾಡುವಂತೆ ಕರೆ ನೀಡಿದರು.

ಪ್ರತಿಯೊಂದು ಬೂತ ನಲ್ಲಿ ಕನಿಷ್ಠ 300 ಜನ ಸದಸ್ಯರನ್ನಾಗಿ ಮಾಡಬೇಕಿದೆ ಇದರಲ್ಲಿ ಕನಿಷ್ಠ 100 ಜನ ಮಹಿಳಾ ಸದಸ್ಯರಿರಬೇಕಿದೆ. ನಮ್ಮಲ್ಲಿ ಮಹಿಳೆಯರ ಸಂಖ್ಯೆ ಕಡಿಮೆ ಇದ್ದು ಈ ಸಮಯದಲ್ಲಿ ಅದನ್ನು ಹೆಚ್ಚಳ ಮಾಡ ಬೇಕಿದೆ. ನಮ್ಮ ಪಕ್ಷ ಕಾರ್ಯಕರ್ತರ ಪಕ್ಷವಾಗಿದೆ ನಮ್ಮಲ್ಲಿ ಸಾಮಾನ್ಯ ಕಾರ್ಯಕರ್ತರ ಉನ್ನತವಾದ ಸ್ಥಾನವನ್ನು ಪಡೆಯಬಹುದೆಂದು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಮಾಡಿ ತೋರಿಸಿದ್ದಾರೆ. ಇದರಂತೆ ಎಲ್ಲರು ಸಹಾ ಒಂದು ದಿನ ಪಕ್ಷದಲ್ಲಿ ಉನ್ನತವಾದ ಸ್ಥಾನವನ್ನುಪಡೆಯಬಹುದಾಗಿದೆ ಅದಕ್ಕಾಗಿ ಕಾಯಬೇಕು ಎಂದ ಅವರು ರಾಜ್ಯದಲ್ಲಿ ಈಗ ಇರುವುದು ದರಿದ್ರ ಸರ್ಕಾರವಾಗಿದೆ ಅದು ಆಡಳಿತಕ್ಕೆ ಬಂದಾಗಿನಿಂದ ರಾಜ್ಯದಲ್ಲಿ ಯಾವ ಅಭೀವೃದ್ಧಿ ಕಾರ್ಯವು ಆಗಿಲ್ಲ, ಕಾನೂನು ಸುವ್ಯವೆಸ್ಥೆ ಹದಗೆಟ್ಟಿ ಹೋಗಿದೆ, ಎಲ್ಲಿ ಅಂದರೆ ಅಲ್ಲಿ ರೌಡಿಗಳ ಅಟ್ಟಹಾಸ ಹೆಚ್ಚಾಗುತ್ತಿದೆ ಇವರನ್ನು ನಿಯಂತ್ರಿಸಬೇಕಿದ್ದ ಸರ್ಕಾರ ಅವರಿಗೆ ಸಹಾಯ ಮಾಡುತ್ತಿದೆ ಇದಕ್ಕೆ ಉದಾಹರಣೆಯಾಗಿ ಇತ್ತೀಚೆನ ದಿನದಲ್ಲಿ ಪರಪ್ಪನ ಆಗ್ರಹಾರದಲ್ಲಿ ನಡೆಯುವ ಘಟನೆಗಳು ಕಾರಣವಾಗಿದೆ. ಇದರ ಬಗ್ಗೆ ಜನರಿಗೆ ತಿಳಿಸುವ ಕಾರ್ಯವನ್ನು ಮಾಡಬೇಕಿದೆ ಎಂದರು.

ರಾಜ್ಯದಲ್ಲಿ ಸರ್ಕಾರವನ್ನು ಯಾರು ಬೀಳಿಸುವುದಿಲ್ಲ ಅದು ತಾನಾಗಿಯೇ ಬೀಳುತ್ತದೆ. ಪಕ್ಷದ ಕಾರ್ಯಕರ್ತರು ಉತ್ಸಾಹದಿಂದ ಕೆಲಸವನ್ನು ಮಾಡಬೇಕಿದೆ. ನಮ್ಮೆಲ್ಲರಿಗೂ ಪಕ್ಷ ತಾಯಿ ಇದ್ದಂತೆ ಅದಕ್ಕೆ ದ್ರೋಹ ಮಾಡದೇ ಆತ್ಮ ವಿಶ್ವಾಸದಿಂದ ಕೆಲಸವನ್ನು ಮಾಡಬೇಕಿದೆ. ಆಗ ಮಾತ್ರ ಪಕ್ಷದಲ್ಲಿ ಉನ್ನತವಾದ ಸ್ಥಾನ ದೂರಕಲು ಸಾಧ್ಯವಿದೆ ಎಂದು ಗೋವಿಂದ ಕಾರಜೋಳ ತಿಳಿಸಿದರು.

ಶಾಸಕರಾದ ಎಂ.ಚಂದ್ರಪ್ಪ ಮಾತನಾಡಿ, 2018ರಲ್ಲಿ ನಮ್ಮ ಪಕ್ಷ ಸದಸ್ಯ ಅಭೀಯಾನವನ್ನು ಮಾಡಿತ್ತು ಅದರಲ್ಲಿ 8 ಕೋಟಿ ಜನರನ್ನು ಸದಸ್ಯರನ್ನಾಗಿ ಮಾಡಲಾಗಿತ್ತು ಈಗ 10 ಕೋಟಿ ಜನರನ್ನು ಸದಸ್ಯರನ್ನಾಗಿ ಮಾಡುವ ಗುರಿಯನ್ನು ನೀಡಲಾಗಿದೆ. ಇದರ ಬಗ್ಗೆ ಎಲ್ಲರು ಶ್ರಮಿಸಬೇಕಿದೆ.ಹೊಳಲ್ಕೆರೆಯಲ್ಲಿ 80 ಸಾವಿರ ಜನರನ್ನು ಸದಸ್ಯರನ್ನಾಗಿ ಮಾಡಲಾಗಿತ್ತು ಇದರಿಂದ ಚುನಾವಣೆಯಲ್ಲಿ ಹೆಚ್ಚಿನ ಮತಗಳನ್ನು ಪಡೆಯಲು ಸಾಧ್ಯವಾಗಿತ್ತು. ಮುಂದಿನ ದಿನದಲ್ಲಿ ಜಿ.ಪಂ. ತಾ.ಪಂ. ಎಪಿಎಂಸಿ ಚುನಾವಣೆಗಳು ಬರಲಿವೆ. ಇದು ಕಾರ್ಯಕರ್ತರ ಚುನಾವಣೆಯಾಗಿದೆ ಇದರಲ್ಲಿ ಪಕ್ಷಕ್ಕಾಗಿ ದುಡಿದ ಕಾರ್ಯಕರ್ತರನ್ನು ಚುನಾವಣೆಗೆ ಹುರಿದುಂಬಿಸಬೇಕಿದೆ. ಸೆ, 1ರಿಂದ 30 ರವರೆಗೆಸದಸ್ಯತ್ವಅಭೀಯಾನನಡೆಯಲಿದ್ದು ಇದರಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನಮ್ಮ ಜಿಲ್ಲೆಯಿಂದ ಸದಸ್ಯರನ್ನಾಗಿ ಮಾಡಬೇಕಿದೆ ಎಂದು ತಿಳಿಸಿದರು.

ಕಾರ್ಯಗಾರದ ಅಧ್ಯಕ್ಷತೆಯನ್ನು ವಹಿಸಿದ್ದ ಬಿಜೆಪಿ ಜಿಲ್ಲಾಧ್ಯಕ್ಷರಾದ ಎ.ಮುರಳಿ ಮಾತನಾಡಿ, ನಮ್ಮ ಪಕ್ಷದಲ್ಲಿ ಪ್ರತಿ ಆರು ವರ್ಷಕ್ಕೊಮ್ಮೆ ಸದಸತ್ ಅಭೀಯಾನವನ್ನು ಮಾಡಲಾಗುತ್ತದೆ. ಇದರಲ್ಲಿ ಸದಸ್ಯತ್ವ ಪಡೆದವರು ಪಕ್ಷದ ವಿವಿಧ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬಹುದು ಅಲ್ಲದೆ ವಿವಿಧ ರೀತಿಯ ಹುದ್ದೆಗಳನ್ನು ಸಹಾ ಪಡೆಯಬಹುದಾಗಿದೆ ಸದಸ್ಯತ್ ಪಡೆಯದೆ ಪಕ್ಷದಲ್ಲಿ ಯಾವ ಹುದ್ದೆಗಳು ಸಹಾ ಸಿಗುವುದಿಲ್ಲ ಎಂದು ತಿಳಿಸಿ, ಪಕ್ಷ ನೀಡುವಂತ ಜವಾಬ್ದಾರಿಯನ್ನು ಸರಿಯಾದ ರೀತಿಯಲ್ಲಿ ನಿಭಾಯಿಸಿ ಕೊಟ್ಟ ಕೆಲಸವನ್ನು ಅಚ್ಚುಕಟ್ಟಾಗಿ ಮಾಡಿ, ಸೆ. 2 ರಿಂದ 17 ರವರೆಗೆ ದೂರವಾಣಿ ಮೂಲಕ ಸದಸ್ಯವನ್ನು ಪಡೆಯಲು ಅವಕಾಶವನ್ನು ನೀಡಲಾಗಿದೆ. ಈ ಬಾರಿ 100 ರೂ, ನೀಡಿ ಸದಸ್ಯತ್ವವನ್ನು ಪಡೆಯಬಹುದಾಗಿದೆ ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರಾಮದಾಸ್, ಸುರೇಶ್ ಸಿದ್ದಾಪುರ, ಸದಸ್ಯತ್ವಾ ಅಭಿಯಾನದ ಸಂಚಾಲಕರಾದ ಸಂಪತ್ ಕುಮಾರ್, ಸಹ ಸಂಚಾಲಕರಾದ ಮಲ್ಲಿಕಾರ್ಜನ್, ರೂಪ ಸುರೇಶ್, ಮಂಜುನಾಥ್, ಕಲ್‌ಮಟ್, ರಾಜು ಜಿ.ಪಂ.ಮಾಜಿ ಅಧ್ಯಕ್ಷರಾದ ಶ್ರೀಮತಿ ಸೌಬಾಗ್ಯ ಬಸವರಾಜನ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ಕಣ್ಣು ನಮ್ಮ ದೇಹದ ಬಹು ಮಹತ್ವದ ಅಂಗ

» ಚಿತ್ರದುರ್ಗ



ಕಣ್ಣು ನಮ್ಮ ದೇಹದ ಪುಟ್ಟ ಅಂಗವಾದರೂ ಬಹು ಮಹತ್ವದ ಅಂಗ. ನಮಗೆ ದೃಷ್ಟಿ ನೀಡುವುದರೊಂದಿಗೆ ಜಗತ್ತಿನ ಸಂಪರ್ಕಕ್ಕೆ ಬಹು ಮುಖ್ಯ ಸೇತುವೆಯಾಗಿದೆ ಎಂದು ಬಸವೇಶ್ವರ ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರದ ಸಹ ಪ್ರಾಧ್ಯಾಪಕರಾದ ಡಾ ಎ.ಃ.ಈಶ್ವರಪ್ಪ ತಿಳಿಸಿದರು.

ಬಸವೇಶ್ವರ ಪುನರ್ ಜ್ಯೋತಿ ಐ ಬ್ಯಾಂಕ್(ರಿ) ಬಸವೇಶ್ವರ ಮೆಡಿಕಲ್ ಕಾಲೇಜು ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಚಿತ್ರದುರ್ಗ ರೋಟರಿ ಕ್ಲಬ್ ಚಿನ್ಮೂಲಾದ್ರಿ, ಚಿತ್ರದುರ್ಗ ಅಮೃತ ಆಯುರ್ವೇದ ಮೆಡಿಕಲ್ ಕಾಲೇಜು ಮತ್ತು ಆಸ್ಪತ್ರೆ ಚಿತ್ರದುರ್ಗ ಇವರುಗಳ ಸಹಯೋಗದೊಂದಿಗೆ ಅಮೃತ ಆಯುರ್ವೇದ ಮೆಡಿಕಲ್ ಕಾಲೇಜು ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ 39ನೇ ರಾಷ್ಟ್ರೀಯ ನೇತ್ರದಾನ ಪಾಕ್ಷಿಕ–2024ರ ಸಮಾರಂಭ ಉದ್ಘಾಟನೆ ಹಾಗೂ ನೇತ್ರದಾನದ ಬಗ್ಗೆ ಜನ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.ದೇಹದಎಲ್ಲಾಅಂಗಗಳು ಸಮಾನವಾಗಿ ಮಹತ್ವದ್ದಾಗಿದ್ದರೂ, ಕಣ್ಣುಗಳನ್ನು ಹೇಗಾದರೂ ಸ್ವಲ್ಪ ಹೆಚ್ಚು ವಿಶೇಷವೆಂದು ಪರಿಗಣಿಸಬಹುದು. ಇದು ನಮಗೆ ದೃಷ್ಟಿಯನ್ನು ನೀಡುತ್ತದೆ ಮತ್ತು ಪ್ರಪಂಚವು ನೀಡುವ ಸೌಂದರ್ಯವನ್ನು ಆನಂದಿಸಲು ನಮಗೆ ಅವಕಾಶ ನೀಡುತ್ತದೆ. ಆದಾಗ್ಯೂ, ಹಲವಾರು ರೀತಿಯ ದೃಷ್ಟಿ ದೋಷಗಳಿಂದಾಗಿ, ಅನೇಕ ಜನರು ತಮ್ಮ ದೃಷ್ಟಿ ಕಳೆದುಕೊಳ್ಳುತ್ತಾರೆ ಮತ್ತು ಅವರಿಗೆ ಪ್ರಪಂಚವು ಕತ್ತಲೆಯಾಗುತ್ತದೆ. ನೇತ್ರದಾನದ ಸರಳ ಹೆಜ್ಜೆಯ ಮೂಲಕ ನಾವು ಅವರಿಗೆ ಬೆಳಕಿನ ಉಡುಗೊರೆಯನ್ನು ನೀಡಬಹುದು. ಕುರುಡುತನ ಇಂದು ಜಗತ್ತಿನಾದ್ಯಂತ ಕಳವಳಕ್ಕೆ ಪ್ರಮುಖ ಕಾರಣವಾಗಿದೆ. ಘಲೂಔ ಪ್ರಕಾರ, ಕಣ್ಣಿನ ಪೊರೆ ಮತ್ತು ಗ್ಲುಕೋಮಾದ ನಂತರ, ಕುರುಡುತನವು ಹೆಚ್ಚಾಗಿ ಕಾರ್ನಿಯಲ್ ದುರ್ಬಲತೆಗಳಿಂದ ಉಂಟಾಗುತ್ತದೆ. ಈ ದುರ್ಬಲತೆಗಳಲ್ಲಿ ಹೆಚ್ಚಿನವು ಗುಣಪಡಿಸಬಹುದಾದವು, ವಿಶೇಷವಾಗಿ ನೇತ್ರದಾನದ ಮೂಲಕ, ಇದು ಮರಣದ ನಂತರ ಒಬ್ಬರ ಕಣ್ಣುಗಳನ್ನು ದಾನ ಮಾಡುವುದನ್ನು ಸೂಚಿಸುತ್ತದೆ. ಇತರ ದೇಹದ ಅಂಗಗಳಂತೆ, ಕಣ್ಣಿನ ಕಾರ್ನಿಯಾವನ್ನು ಸಹ ಮರಣದ ನಂತರ ದಾನ ಮಾಡಬಹುದು, ಇದು ಅಂಧರಿಗೆ ದೃಷ್ಟಿ ನೀಡುತ್ತದೆ ಎಂದರು.

ಇಂದು ಭಾರತದಲ್ಲಿ 25–30 ಲಕ್ಷ ಕಾರ್ನಿಯಾಅಂಧರು(ಮಕ್ಕಳುವೃದ್ಧರಾದಿ) ಮರುದೃಷ್ಟಿ ಹೊಂದಲು ಸಾಕಷ್ಟು ದಾನಿ ನೇತ್ರಗಳಿಲ್ಲದೇ ಹತಾಶರಾಗುತ್ತಿದ್ದಾರೆ. ವರ್ಷಕ್ಕೆ ಒಂದು ಲಕ್ಷದಷ್ಟು ನೇತ್ರದಾನಿಗಳ ಬೇಡಿಕೆಗೆ ಪ್ರತಿಯಾಗಿ ಕೇವಲ ಶೇ.5 ರಷ್ಟು ಪೂರೈಕೆಯಾಗುತ್ತಿದೆ. ಅಲ್ಲದೇ 20,000 ಅಧಿಕ ಹೊಸ ಅಂಧರು ಈ ಗುಂಪಿಗೆ ಸೇರುತ್ತಿದ್ದಾರೆ.ನಮ್ಮ ದೇಶದಲ್ಲಿ ನೇತ್ರದಾನದ ವಿರಳತೆಗೆ ಮುಖ್ಯ ಕಾರಣ ಜನಜಾಗೃತಿಯ ಅಭಾವ. ಇದಕ್ಕೆ ಪೂರಕವಾಗಿ ಅಜ್ಞಾನ, ಮೂಢನಂಬಿಕೆ, ಅಲಕ್ಷ್ಯ ಮತ್ತು ನೇತ್ರ ಸಂಗ್ರಹಣೆಗೆ ಸೌಲಭ್ಯ ಕೆಲವೇ ನಗರಗಳಿಗೆ ಸೀಮಿತವಾಗಿರುವುದು. ಅರಿವಿನ ಕೊರತೆ, ಸಾಮಾಜಿಕ ಅಥವಾ ಧಾರ್ಮಿಕ ಮೀಸಲು ಇತ್ಯಾದಿಗಳಿಂದ, ನೇತ್ರದಾನಕ್ಕೆ ನಮ್ಮ ದೇಶದಲ್ಲಿ ಇನ್ನೂ ಹೆಚ್ಚಿನ ಪ್ರಾಮುಖ್ಯತೆ ಸಿಕ್ಕಿಲ್ಲ ಎಂದರು.

ರೋಟರಿ ಕ್ಲಬ್ ಚಿನ್ಮೂಲಾದ್ರಿಯ ಅಧ್ಯಕ್ಷರಾದ ಮಂಜುನಾಥ್ ಭಾಗ್ವತ್ ಮಾತನಾಡಿ, ವಯಸ್ಸು, ಲಿಂಗ, ರಕ್ತದ ಗುಂಪು ಅಥವಾ ಧರ್ಮವನ್ನು ಲೆಕ್ಕಿಸದೆ ಯಾರಾದರೂ ದಾನಿಯಾಗಬಹುದು ಕಣ್ಣಿನ ಪೊರೆ, ದೀರ್ಘ/ಸಣ್ಣ ದೃಷ್ಟಿ, ಆಪರೇಟೆಡ್ ಕಣ್ಣುಗಳು ಅಥವಾ ಸಾಮಾನ್ಯ ಕಾಯಿಲೆ ಇರುವ ಯಾರಾದರೂ ನೇತ್ರದಾನ ಮಾಡಬಹುದು. ಹಾನಿಗೊಳಗಾದ ಕಾರ್ನಿಯಾವನ್ನು ಆರೋಗ್ಯಕರ ದಾನ ಮಾಡಿದ ಮಾನವ ಕಾರ್ನಿಯಾದೊಂದಿಗೆ ಬದಲಾ ಯಿಸುವ ಮೂಲಕ ಕಾರ್ನಿಯಲ್ ಕುರುಡುತನಕ್ಕೆ ಚಿಕಿತ್ಸೆ ನೀಡಬಹುದು. ವ್ಯಕ್ತಿಯ ಮರಣದ ಆರು ಗಂಟೆಗಳ ಒಳಗೆ ಕಾರ್ನಿಯಾವನ್ನು ದೇಹದಿಂದ ತೆಗೆದುಹಾಕುವುದು ಅತ್ಯಗತ್ಯ ಒಬ್ಬ ವ್ಯಕ್ತಿಯಿಂದ ನೇತ್ರದಾನ ಮಾಡುವುದರಿಂದ ಇಬ್ಬರು ಕಾರ್ನಿಯಲ್ ಅಂಧರಿಗೆ ದೃಷ್ಟಿ ಪಡೆಯಬಹುದು ನೇತ್ರಗಳನ್ನು ಮೃತರು ಮರಣಹೊಂದಿದ ಆರು ಗಂಟೆಗಳೊಳಗೆ ತೆಗೆಯಬೇಕು. ಅದನ್ನು ಹತ್ತಿರದ ನೇತ್ರ ಭಂಡಾರಕ್ಕೆ ತಿಳಿಸುವುದಕ್ಕೆ ತಡಮಾಡಬಾರದು. ನಿಮ್ಮ ಕುಟುಂಬದಲ್ಲಿ ಇಲ್ಲವೇ ಸ್ನೇಹಿತರ ವಲಯದಲ್ಲಿ ಯಾರಾದರೂ ಮೃತರಾದ ತಕ್ಷಣ ಕೂಡಲೇ ಈ ಕಾರ್ಯ ನಡೆಯಬೇಕು ಎಂದರು. ಬಸವೇಶ್ವರ ಪುನರ್ ಜ್ಯೋತಿ ಐ ಬ್ಯಾಂಕ್‌ನ ಸಂಚಾಲಕರಾದ ಎಸ್.ವೀರೇಶ್ ಮಾತನಾಡಿ, ನೇತ್ರದಾನದ ಬಗ್ಗೆ ಜನಸಾಮಾನ್ಯರಲ್ಲಿ ಜಾಗೃತಿ ಮೂಡಿಸಲು ಪ್ರತಿ ವರ್ಷ ಆಗಸ್ಟ್ 25 ರಿಂದ ಸೆಪ್ಟೆಂಬರ್ 9 ರವರೆಗೆ ರಾಷ್ಟ್ರೀಯ ನೇತ್ರದಾನಪಾಕ್ಷಿಕವನ್ನುಆಚರಿಸಲಾಗುತ್ತದೆ. ನೇತ್ರದಾನ ಮಾಡುವುದು ಮರಣಾನಂತರ ಮತ್ತು ಬಂಧುಗಳ ಅನುಮತಿ ಇದ್ದಾಗ ಮಾತ್ರ. ಜಾತಿಧರ್ಮದ ಕಟ್ಟುಪಾಡುಗಳಿಲ್ಲ. ಸ್ತ್ರೀ ಪುರುಷರೆನ್ನದೇ ಮೃತ ವ್ಯಕ್ತಿ ದಾನದ ಬಗ್ಗೆ ಅನುಮತಿ ನೀಡಿರಲಿ, ಇಲ್ಲದಿರಲಿ ದಾನಕ್ಕೆ ಅರ್ಹ. ದಾನ ನೀಡುವವರು ಕನ್ನಡದ ಧರಿಸುತ್ತಿರಲಿ, ದೃಷ್ಟಿದೋಷ ಹೊಂದಿರಲಿ, ಸಕ್ಕರೆ ಕಾಯಿಲೆ, ರಕ್ತದ ಏರೊತ್ತಡ, ಅಸ್ತಮಾ, ಕ್ಷಯದಂತಹ ಕಾಯಿಲೆಗಳಿಂದ ನರಳುತ್ತಿರಲಿ ಅಥವಾ ಮೋತಿಬಿಂದು ತೆಗೆಸಿಕೊಳ್ಳುವ ಶಸ್ತ್ರಕ್ರಿಯೆಗೆ ಒಳಗಾಗಿರಲಿ, ನೇತ್ರದಾನ ಮಾಡಬಹುದಾಗಿದೆ ಎಂದರು.

ನಮ್ಮೆಲ್ಲರಿಗೂ ನೇತ್ರದಾನಕ್ಕೆ ನೋಂದಣಿ ಮಾಡಿಕೊಳ್ಳುವ ಅವಕಾಶವಿದೆ. 18 ವರ್ಷಕ್ಕೆ ಮೇಲ್ಪಟ್ಟ ಯಾವುದೇ ವ್ಯಕ್ತಿ ಯಾವುದೇ ನೇತ್ರಭಂಡಾರದಲ್ಲಿ ತಮ್ಮ ಮರಣೋತ್ತರ ನೇತ್ರದಾನದ ಅಭಿಲಾಷೆಯನ್ನು ಲಿಖಿತ ರೂಪದಲ್ಲಿ ನೋಂದಾಯಿಸಬಹುದು. ಎಲ್ಲ ನೇತ್ರಭಂಡಾರಗಳು 24 ಗಂಟೆಗಳೂ ದಾನಿ ನೇತ್ರ ಸಂಗ್ರಹಣಾ ಕಾರ್ಯವನ್ನು ಉಚಿತವಾಗಿ ಮೃತರಿರುವ ಸ್ಥಳಕ್ಕೆ ಧಾವಿಸಿ ಮಾಡುತ್ತವೆ. ದಾನ ಮಾಡುವ ಮತ್ತು ಪಡೆಯುವ ವ್ಯಕ್ತಿಯ ವಿವರಗಳನ್ನು ಗುಪ್ತವಾಗಿ ಇರಿಸಲಾಗುತ್ತದೆ. ನೇತ್ರದಾನದಿಂದ ಅಂಧರಾದ ಇಬ್ಬರು ವ್ಯಕ್ತಿಗಳಿಗೆ ದೃಷ್ಟಿ ಲಭಿಸುತ್ತದೆ. ಈ ದಾನಕ್ಕಾಗಿ ಯಾವುದೇ ಹಣವನ್ನು ದಾನಿಯ ಕುಟುಂಬಕ್ಕೆ ನೀಡುವುದಿಲ್ಲ ಅಥವಾ ಇದಕ್ಕಾಗಿ ದಾನಿ ಯಾವುದೇ ಹಣ ವೆಚ್ಚ ಮಾಡುವಂತಿಲ್ಲ. ದಾನವಾಗಿ ಬರುವ ನೇತ್ರಗಳು ಮಾರಾಟದ ವಸ್ತುವಲ್ಲ. ಮೃತರ ನೇತ್ರಗಳನ್ನು ಸಂಗ್ರಹಿಸಿದ ನಂತರ ನೇತ್ರಭಂಡಾರಕ್ಕೆ ತೆಗೆದುಕೊಂಡು ಹೋಗಿ ಪರೀಕ್ಷಿಸಿ, ಸಂಸ್ಕರಿಸಿ ನಾಟಿಗೆ ಅಣಿ ಮಾಡಿಕೊಳ್ಳುತ್ತಾರೆ.

## ಫಾಸ್ಟ್ ನ್ಯೂಸ್

### ಗ್ರಾಮ ಸಹಾಯಕರ ಹುದ್ದೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಹಿರಿಯೂರು ತಾಲ್ಲೂಕಿನ ಕಸಬ ಹೋಬಳಿಯ ಹುಚ್ಚವ್ವನಹಳ್ಳಿ, ಹಿರಿಯೂರು ಹಾಗೂ ಜೆ.ಜಿ.ಹಳ್ಳಿ ಹೋಬಳಿಯ ಕಾಟನಾಯಕನಹಳ್ಳಿ ಕಂದಾಯ ವೃತ್ತಗಳ ಗ್ರಾಮ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಆಗಸ್ಟ್ 30 ಅರ್ಜಿ ಸಲ್ಲಿಸಲು ಕೊನೆಯ ದಿನ. ಗ್ರಾಮ ಸಹಾಯಕ ಹುದ್ದೆಯು ತಾತ್ಕಾಲಿಕ ಹುದ್ದೆಯಾಗಿದ್ದು, ಸರ್ಕಾರದಿಂದ ಕಾಲಕಾಲಕ್ಕೆ ನಿಗದಿಯಾಗುವಂತಹ ಗೌರವಧನ ಪಾವತಿಸಲಾಗುವುದು. ಅರ್ಹ ಅಭ್ಯರ್ಥಿಗಳಿಗೆ ಸಂದರ್ಶನ ನಡೆಸಿ ನೇಮಕಾತಿಗೆ ಕ್ರಮವಹಿಸಲಾಗುವುದು.

**ಅರ್ಹತೆಗಳು:** ನಿಗದಿತ ನಮೂನೆ–1ರಲ್ಲಿ ಅರ್ಜಿ ಸಲ್ಲಿಸಬೇಕು. ಅಭ್ಯರ್ಥಿಗೆ ಅರ್ಜಿ ಸಲ್ಲಿಸುವ ದಿನಾಂಕಕ್ಕೆ25ವರ್ಷಗಳುಪೂರ್ಣಗೊಂಡಿರಬೇಕು. ಅಕ್ಷರಸ್ಥರಾಗಿರುವ ಬಗ್ಗೆ ಸೂಕ್ತ ದಾಖಲಾತಿಗಳನ್ನು ಲಗತ್ತಿಸುವುದು. ಸಾಮಾನ್ಯ ಕಂಪ್ಯೂಟರ್ ಸಾಕ್ಷರತೆಯ ತರಬೇತಿ ಪಡೆದಿರುವ ಕುರಿತು ಪ್ರಮಾಣ ಪತ್ರ ಲಗತ್ತಿಸುವುದು. ಈ ಹಿಂದೆ ಈ ಕಂದಾಯ ವೃತ್ತಕ್ಕೆ ಸೇರಿದ ಗ್ರಾಮಗಳಲ್ಲಿ ಕರ್ತವ್ಯ ನಿರ್ವಹಿಸಿದ ಕೆಳಮಟ್ಟದ ಗ್ರಾಮ ನೌಕರರ ವಂಶಸ್ಥರಿಗೆ ಆದ್ಯತೆ ನೀಡಲಾಗುವುದು. ಕೆಳಮಟ್ಟದ ನೌಕರರ ವಂಶಸ್ಥರೆಂಬುವ ಬಗ್ಗೆ ದಾಖಲೆ ಲಗತ್ತಿಸುವುದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ ಮೊದಲನೇ ಆದ್ಯತೆ ನೀಡಲಾಗುವುದು. ಕ್ರಿಮಿನಲ್ ಮೊಕದ್ದಮೆ ಹಿನ್ನಲೆಯುಳ್ಳವರಾಗಿರಬಾರದು. ಕಂದಾಯ ವೃತ್ತಕ್ಕೆ ಸೇರಿದ ಗ್ರಾಮಗಳ ನಿವಾಸಿಯಾಗಿರಬೇಕು. ಹೆಚ್ಚಿನ ಮಾಹಿತಿಗಾಗಿ ಹಿರಿಯೂರು ತಹಶೀಲ್ದಾರ್ ಕಾರ್ಯಾಲಯ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಸೆ.01ರಂದು ಬಾಲ್ಯವಿವಾಹ ಮತ್ತು ಬಾಲ್ಯ ಗರ್ಭಾವಸ್ಥೆ ತಡೆಗಟ್ಟುವ ಬಗ್ಗೆ ವಿಶೇಷ ಉಪನ್ಯಾಸ

» ಚಿತ್ರದುರ್ಗ

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ವಕೀಲರ ಸಂಘ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ಸೆಪ್ಟೆಂಬರ್ 01ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ "ಬಾಲ್ಯವಿವಾಹ ಮತ್ತು ಬಾಲ್ಯಗರ್ಭಾವಸ್ಥೆ ತಡೆಗಟ್ಟುವ ಬಗ್ಗೆ ವಿಶೇಷ ಉಪನ್ಯಾಸ" ಆಯೋಜಿಸಲಾಗಿದೆ. ಕರ್ನಾಟಕ ಉಚ್ಚ ನ್ಯಾಯಾಲಯ ನ್ಯಾಯಮೂರ್ತಿಗಳು ಹಾಗೂ ಚಿತ್ರದುರ್ಗ ಜಿಲ್ಲೆ ಆಡಳಿತಾತ್ಮಕ ನ್ಯಾಯಮೂರ್ತಿಗಳಾದ ಆರ್.ನಟರಾಜ್ ಕಾರ್ಯಕ್ರಮ ಉದ್ಘಾಟಿಸಿ, ವಿಶೇಷ ಉಪನ್ಯಾಸ ನೀಡುವರು. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ ರೋಣ ವಾಸುದೇವ ಪ್ರಾಸ್ತಾವಿಕ ನುಡಿಗಳನ್ನಾಡುವರು. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ಜಿಲ್ಲಾ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು, ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಭಾಗವಹಿಸುವರು ಎಂದು ಪ್ರಕಟಣೆ ತಿಳಿಸಿದೆ.

### ಯುವಕ ಕಾಣೆ

» ಚಿತ್ರದುರ್ಗ

ಚಳ್ಳಕೆರೆ ಟೌನ್ ತ್ಯಾಗರಾಜ ನಗರದ ಬಾಪೂಜಿ ಕಾಲೇಜಿನ ಹಿಂಭಾಗದ ನಿವಾಸಿ ಮೃತ್ಯುಂಜಯ ಜೆ.ಜೆ (20 ವರ್ಷ) ಅವರು ಕಾಣೆಯಾದ ಪ್ರಕರಣ ಜುಲೈ 30ರಂದು ಚಳ್ಳಕೆರೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಮೃತ್ಯುಂಜಯ, 5.4 ಅಡಿ ಎತ್ತರ, ನೀಳ ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ, ಇಂಗ್ಲೀಷ್ ಮತ್ತು ಹಿಂದಿ ಭಾಷೆಯನ್ನು ಮಾತನಾಡುವರು. ಮನೆಯಿಂದ ಹೋಗುವಾಗ ಹಸಿರು ಬಣ್ಣದ ಜಾಗ್ವರ್ ಪ್ಯಾಂಟ್ ಹಾಗೂ ಬಿಳಿಯ ಅರ್ಧ ತೋಳಿನ ಕೇಸರಿ ಹಸಿರು ಬಣ್ಣದ ಫ್ರಿಂಟೆಡ್ ಟೀ ಶರ್ಟ್ ಧರಿಸಿರುತ್ತಾನೆ.

ಈ ಮೇಲ್ಕಂಡ ಯುವಕನ ಬಗ್ಗೆ ಮಾಹಿತಿ ದೊರೆತಲ್ಲಿ ಚಳ್ಳಕೆರೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08195–250239, ನಿರೀಕ್ಷಕರ ದೂರವಾಣಿ ಸಂಖ್ಯೆ 9480803112, ಚಳ್ಳಕೆರೆ ಉಪಾಧೀಕ್ಷಕ ಕಚೇರಿ ದೂರವಾಣಿ ಸಂಖ್ಯೆ 08195–251010 ಹಾಗೂ ಜಿಲ್ಲಾ ನಿಸ್ತಂತು ಕೇಂದ್ರ ಸಂಖ್ಯೆ 08194–222782 ಗೆ ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

### ಅನಾರೋಗ್ಯ ಹಿನ್ನೆಲೆ ಮಹಿಳೆ ಸಾವು

» ಚಳ್ಳಕೆರೆ

ನಗರದ ಸೂಜಿಮಲ್ಲೇಶ್ವರನಗರದ ರಾಧ(38) ಎಂಬ ಮಹಿಳೆ ಚಿಲ್ಲರೆ ಅಂಗಡಿ ಇಟ್ಟುಕೊಂಡು ವ್ಯಾಪಾರ ಮಾಡುತ್ತಿದ್ದು, ತನ್ನ ಪತಿಯ ನಿಧನದಿಂದ ನೊಂದು ಅನಾರೋಗ್ಯಕ್ಕೆ ತುತ್ತಾಗಿದ್ದಳು. ಕಳೆದ ಸೋಮವಾರ ರಾತ್ರಿ ಎದೆನೋವು ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲಾಗಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾಳೆ.

# ನಾಟ್ಯ ನೈದಿಲೆ ನೃತ್ಯೋತ್ಸವಕ್ಕೆ ವೈಭವದ ಚಾಲನೆ

» ಚಿತ್ರದುರ್ಗ



ನೃತ್ಯದಲ್ಲಿ ತನ್ಮತೆಯಿದ್ದವರು ಸಾಧನೆಗೈದು ಜನಮಾನಸದಲ್ಲಿ ಉಳಿಯುತ್ತಾರೆಂದು ಕಬೀರಾನಂದಾಶ್ರಮದ ಶಿವಲಿಂಗಾನಂದ ಮಹಾಸ್ವಾಮಿಗಳು ಹೇಳಿದರು.

ಅಂಜನಾ ನೃತ್ಯ ಕಲಾ ಕೇಂದ್ರ ಚಿತ್ರದುರ್ಗ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೆಂಗಳೂರು ಇವರುಗಳ ಸಂಯುಕ್ತಾಶ್ರಯದಲ್ಲಿ ತ.ರಾ.ಸು. ರಂಗಮಂದಿರದಲ್ಲಿ ಎರಡು ದಿನಗಳ ಕಾಲ ನಡೆದ ನಾಟ್ಯ ನೈದಿಲೆ ನೃತ್ಯೋತ್ಸವ–2024 ಉದ್ಘಾಟಿಸಿ ಮಾತನಾಡಿದರು.ಕಳೆದ ನಲವತ್ತು ವರ್ಷಗಳಿಂದಲೂ ಅಂಜನಾ ನೃತ್ಯ ಕಲಾ ಕೇಂದ್ರದ ದಂಪತಿಗಳಾದ ನಂದಿನಿ ಶಿವಪ್ರಕಾಶ್ ಇವರುಗಳು ಕೇವಲ ಕರ್ನಾಟಕವಲ್ಲದೆ ವಿದೇಶಗಳಲ್ಲಿಯೂ ನೃತ್ಯ ಪ್ರದರ್ಶಿಸಿ ಅನೇಕ ಪ್ರಶಸ್ತಿಗಳನ್ನು ಪಡೆದುಕೊಂಡಿದ್ದಾರೆ. ತಿರುಪತಿಯಲ್ಲಿಯೂ ನೃತ್ಯ ಪ್ರದರ್ಶನ ನೀಡಿ ಜನಮನ ಗೆದ್ದು, ಪ್ರೇಕ್ಷಕರಿಗೆ ನವರಸ ಉಣ ಬಡಿಸುತ್ತಿದ್ದಾರೆಂದು ಶ್ಲಾಘಿಸಿದರು.ಕೆ.ಡಿ.ಪಿ.ಸದಸ್ಯ ಕೆ.ಸಿ.ನಾಗರಾಜ್ ಮಾತನಾಡಿ, ಕಳೆದ ಮೂವತ್ತು ವರ್ಷಗಳಿಂದಲೂ ಅಂಜನಾ ನೃತ್ಯ ಕಲಾ ಕೇಂದ್ರದ ಜೊತೆ ಒಡನಾಟವಿಟ್ಟುಕೊಂಡಿದ್ದೇನೆ. ನೃತ್ಯದ ಮೂಲಕ ನಂದಿನಿ ಶಿವಪ್ರಕಾಶ್ ದಂಪತಿಗಳು ಭಾರತೀಯ ಪರಂಪರೆ, ಸಂಸ್ಕೃತಿಯನ್ನು ಎತ್ತಿಹಿಡಿಯುವ ಕೆಲಸ ಮಾಡುತ್ತಿರುವುದು ನಿಜಕ್ಕೂ ಸಂತೋಷದ ಸಂಗತಿ. ಈ ಮಣ್ಣಿನ ಗುಣವೇ ಅಂತಹುದು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಬ್ರಾಹ್ಮಣ ಸಂಘದ ಅಧ್ಯಕ್ಷ ಪಿ.ಎಸ್. ಮಂಜುನಾಥ್ ಮಾತನಾಡಿ, ನಲವತ್ತು ವರ್ಷಗಳಿಂದಲೂ ಚಿತ್ರದುರ್ಗದಲ್ಲಿ ಅಂಜನಾ ನೃತ್ಯ ಕಲಾಕೇಂದ್ರ ಮನರಂಜನೆ ನೀಡುತ್ತ ಬರುತ್ತಿರುವುದು ಸುಲಭದ ಕೆಲಸವಲ್ಲ. ಇದರ ಹಿಂದೆ ದಂಪತಿಗಳ ಪರಿಶ್ರಮವಿದೆ. ಹಿಂದಿನ ಕಾಲದಲ್ಲಿ ಕಲೆ, ಸಂಸ್ಕೃತಿ, ನೃತ್ಯಕ್ಕೆ ರಾಜಾಶ್ರಯವಿತ್ತು. ಈಗ ಅಂತಹ ಅವಕಾಶವಿಲ್ಲ. ಕಲೆಗಳ ಪ್ರದರ್ಶನಕ್ಕೆ ಇಂತಹ ವೇದಿಕೆ ಅತ್ಯವಶ್ಯಕ. ನವರಸಗಳ ಮೂಲಕ ಪ್ರದರ್ಶಿಸುವ ನೃತ್ಯವನ್ನು ಉಳಿಸಿ ಬೆಳೆಸಬೇಕಿದೆ ಎಂದು ಹೇಳಿದರು.

ಸಂಗೀತ ಮತ್ತು ನೃತ್ಯ ಅಕಾಡೆಮಿ ಅಧ್ಯಕ್ಷೆ ಬೆಂಗಳೂರಿನ ವಿಧುಷಿ ಶುಭಾ ಧನಂಜಯ್, ಹಿನ್ನೆಲೆ ಗಾಯಕಿ ಜ್ಯೋತಿ ರವಿಪ್ರಕಾಶ್, ನೃತ್ಯ ಕಲಾವಿದ ಹಾಗೂ ಶಿಕ್ಷಕ ವಿದ್ವಾನ್ ಅನಿಲ್‌ಕುಮಾರ್, ಅಂಜನಾ ನೃತ್ಯ ಕಲಾ ಕೇಂದ್ರದ ಪ್ರಾಂಶುಪಾಲರಾದ ಶಿವಪ್ರಕಾಶ್ ವೇದಿಕೆಯಲ್ಲಿದ್ದರು.ನಂದಿನಿ ಶಿವಪ್ರಕಾಶ್ ಪ್ರಾಸ್ತಾವಿಕವಾಗಿ ಮಾತನಾಡಿದರು.

## ಕ್ರೀಡೆಯಿಂದ ಸಂಸ್ಕಾರ, ಸಂಸ್ಕೃತಿ, ದೇಶಾಭಿಮಾನ ಹೆಚ್ಚಾಗುತ್ತದೆ: ಶಾಸಕ ಬಸವರಾಜು ವಿ ಶಿವಗಂಗಾ



» ಚನ್ನಗಿರಿ

ತಾಲ್ಲೂಕಿನ ನಲ್ಲೂರು ವಲಯಮಟ್ಟದ ಗ್ರಾಮಾಂತರ ಪ್ರೌಢ ಶಾಲಾ ವಿಭಾಗದ ಕ್ರೀಡಾಕೂಟಕ್ಕೆ ಕೆರೆಬಿಳಚಿಯಲ್ಲಿ ಶಾಸಕರಾದ ಬಸವರಾಜು ವಿ ಶಿವಗಂಗಾ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು ಕ್ರೀಡೆ ಕೇವಲ ಒಂದು ಆಟವಲ್ಲ ಇದರಿಂದ ಹತ್ತಾರು ಉಪಯೋಗಗಳಿವೆ, ಇದರಿಂದ ಸಂಯಮ ಸಮಯ ಪಾಲನೆ, ಶಿಸ್ತು ಕಲಿಯಬಹುದೆಂದು ತಿಳಿಸಿದರು. ಕ್ರೀಡೆ ಎಂದರೆ ಒಂದು ಶಿಸ್ತು ಇದರಿಂದ ನಮ್ಮ ಜೀವನ ಶೈಲಿಯನ್ನೇ ಬದಲಿಸಿಕೊಳ್ಳಬಹುದು. ನಮ್ಮ ಸಂಸ್ಕೃತಿ, ಸಂಸ್ಕಾರ ಮತ್ತು ದೇಶಾಭಿಮಾನವನ್ನು ಕ್ರೀಡೆಯಿಂದ ಕಲಿಯಬಹುದೆಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು. ಸರ್ಕಾರ ಕ್ರೀಡೆಯಲ್ಲಿ ಆಸಕ್ತಿ ಹೊಂದಿದ ವಿದ್ಯಾರ್ಥಿಗಳಿಗೆ ಸಾಕಷ್ಟು ನೆರವು ನೀಡುತ್ತದೆ ಉತ್ತಮ ಸಾಧನೆ ಮಾಡುವ ವಿದ್ಯಾರ್ಥಿಗಳಿಗೆ ಸದಾ ಕಲಾ ನಾನು ವೈಯುಕ್ತಿಕವಾಗಿ ಬೆಂಬಲಕ್ಕೆ ನಿಲ್ಲುವೆ ಎಂದರು. ಯಾವುದೇ ಕ್ಷೇತ್ರವಾಗಲಿ ಶ್ರದ್ಧೆಯಿಂದ ಕೆಲಸ ಮಾಡಿದರೆ ಸಾಧನೆ ಮಾಡಬಹುದು ಎಂದರು. ಕ್ರೀಡೆ ಎಂಬುದು ಒಂದು ಆಟವಲ್ಲ ಜೀವನದಲ್ಲಿ ಬದಲಾಗಲು ಸಹಾಯಕವಾಗುವ ಒಂದು ಕ್ಷೇತ್ರ ಎಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು. ಮಕ್ಕಳ ಪ್ರತಿಭೆಗೆ ತಕ್ಕಂತೆ ಪ್ರೋತ್ಸಹ ನೀದಬೇಕು ಕ್ರೀಡೆಯಲ್ಲೂ ಮಕ್ಕಳಿಗೆ ಉತ್ತಮ ಭವಿಷ್ಯವಿರುತ್ತದೆ ನಾವೆಲ್ಲರೂ ಗುರುತಿಸಿ ಪ್ರೋತ್ಸಾಹ ಮಾಡಬೇಕೆಂದು ಸಲಹೆ ನೀಡಿದರು. ಈ ವೇಳೆ ಬಿಇಓ, ದೈಹಿಕ ಶಿಕ್ಷಣ ಇಲಾಖೆ ಅಧಿಕಾರಿಗಳು, ಗ್ರಾ. ಪಂ ಆಡಳಿತ ಮಂಡಳಿ, ಸದಸ್ಯರು ಹಾಗೂ ಗ್ರಾಮಸ್ಥರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು

## ತಂಬಾಕು ದಾಳಿ, ರೂ.9500 ದಂಡ ವಸೂಲಿ

**ದಾವಣಗೆರೆ:** ಜಿಲ್ಲಾಡಳಿತ, ಮಹಾನಗರ ಪಾಲಿಕೆ, ಜಿಲ್ಲಾ ಆರೋಗ್ಯ ಮತ್ತು ಕು. ಕ ಇಲಾಖೆ, ಅಬಕಾರಿ ಇಲಾಖೆ ಮತ್ತು ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ಅಬಕಾರಿ ಆಯುಕ್ತರ ಆದೇಶದಂತೆ ಶಾಲೆಯಿಂದ 100 ಗಜದ ಅಂತರದೊಳಗೆ ತಂಬಾಕು ಹಾಗೂ ಅದರ ಉತ್ಪನ್ನಗಳನ್ನು ಮಾರಾಟ ಮಾಡುವವರಿಗೆ ಎಚ್ಚರಿಕೆ ನೀಡಿ ಕೋಟ್ಪಾದಡಿ 48 ಪ್ರಕರಣಗಳನ್ನು ದಾಖಲಿಸಿ ರೂ.9500 ದಂಡ ವಿಧಿಸಲಾಯಿತು. ದಾಳಿಯಲ್ಲಿ ತಾಲ್ಲೂಕು ಆರೋಗ್ಯ ಅಧಿಕಾರಿಗಳಾದ ದೇವರಾಜ್.ಪಿ, ಜಿಲ್ಲಾ ಸಲಹೆಗಾರ ಸತೀಶ ಕಲಹಾಳ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಉಮಾಪತಿ.ಎಂ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಟಾಚಲಕುಮಾರ, ಅಬಕಾರಿ ಉಪ ನಿರೀಕ್ಷಕರಾದ ರಂಗನಾಥ, ಹಿರಿಯ ಆರೋಗ್ಯ ನಿರೀಕ್ಷಕರಾದ ಜಯಪ್ರಕಾಶ್ ಮತ್ತು ವಿನಾಯಕ, ಅಬಕಾರಿ ಇಲಾಖೆ ಕಾನ್‌ಸ್ಟೇಬಲ್ ಆರ್.ದೀಲಿಪ್ ಇದ್ದರು.

**ಪ್ರಮುಖ ಸುದ್ದಿ**

# 30ಕ್ಕೆ ಮೈಲಾರಲಿಂಗೇಶ್ವರಸ್ವಾಮಿ ದೇವಸ್ಥಾನ ಉದ್ಘಾಟನೆ

» ಚಿತ್ರದುರ್ಗ



ನಗರದ ಬುರುಜನಹಟ್ಟಿಯ ಉಪ್ಪು ನೀರುಬಾವಿ ರಸ್ತೆಯಲ್ಲಿನ ಶ್ರೀ ಮೈಲಾರಲಿಂಗೇಶ್ವರ ದೇವಸ್ಥಾನ ಜೀರ್ಣೋದ್ಧಾರ ಅಭಿವೃದ್ಧಿ ಸಮಿತಿ ವತಿಯಿಂದ ಆಗಸ್ಟ್ 30 ರಿಂದ ಸೆಪ್ಟೆಂಬರ್ 1 ರವರೆಗೆ ಶ್ರೀ ಮೈಲಾರಲಿಂಗೇಶ್ವರಸ್ವಾಮಿ, ಗಂಗಾಮಾಳಮ್ಮ ದೇವಿಯ ದೇವಸ್ಥಾನ ಹಾಗೂ ಸಮುದಾಯ ಭವನದ ಉದ್ಘಾಟನಾ ಕಾರ್ಯಕ್ರಮ ನಡೆಯಲಿದೆ ಎಂದು ಸಮಿತಿಯ ಕಾರ್ಯದರ್ಶಿ ಎಂ.ನಿಶಾನಿ ಜಯ್ಯಣ್ಣ ತಿಳಿಸಿದ್ದಾರೆ.

ನಗರದ ಪತ್ರಿಕಾ ಭವನದಲ್ಲಿ ಇಂದು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಇಲ್ಲಿನ ಮೈಲಾರಲಿಂಗೇಶ್ವರ ದೇವಸ್ಥಾನ ಚಾಲುಕ್ಯರ ಕಾಲದ್ದಾಗಿದ್ದು, ನಮ್ಮ ಮನೆತನ ಇದಕ್ಕೆ ನಡೆದುಕೊಂಡು ಬರುತ್ತಿದೆ. ಶಿಥಿಲಗೊಂಡಿದ್ದ ದೇವಸ್ಥಾನವನ್ನು ಪುನರ್ ನಿರ್ಮಾಣ ಮಾಡಲಾಗಿದೆ. ಇದಲ್ಲದೆ ಸುತ್ತಮುತ್ತಲಿನ ವಾರ್ಡ್‌ಗಳ ಜನತೆಯ ಅನುಕೂಲಕ್ಕಾಗಿ ಸುಮಾರು 2 ಕೋಟಿ ರೂ ವೆಚ್ಚದಲ್ಲಿ ಸಮುದಾಯ ಭವನವನ್ನು ನಿರ್ಮಾಣ ಮಾಡಲಾಗಿದ್ದು, ಇದರ ಉದ್ಘಾಟನೆ ಸೆ.1 ರಂದು ನಡೆಯಲಿದೆ ಎಂದರು.

ಆ. 30ರ ಶುಕ್ರವಾರ ಸಂಜೆ 6.00 ರಿಂದ ಶ್ರೀ ಮಹಾ ಗಣಪತಿ ಪೂಜೆ, ಆಚಾರ್ಯಾದಿ ಋತ್ವಿಕ್ ವರುಣಂ, ಪ್ರಸಾದ ಶುದ್ಧಿ, ಸ್ಥಳ ಶುದ್ಧಿ, ರಾಕ್ಷೋಘ್ನ ಹೋಮ, ಸುದರ್ಶನ ಹೋಮ, ವಾಸ್ತುಶಾಂತಿ ಹೋಮ, ವಾಸ್ತು ಬಲಿ ಆ.31ರ ಶನಿವಾರಪೂಜೆ, ಪಂಚಗವ್ಯ ಮೇಳನ, ಬಿಂಬಶುದ್ಧಿ, ರಕ್ಷಾ ಬಂಧನ, ಅಧಿವಾಸ ಪೂಜೆ, ಕಲಶಾರಾಧನೆ, ಗ್ರಹಾರಾಧನೆ, ಶ್ರೀ ಮಹಾಗಣಪತಿ ಹೋಮ, ನವಗ್ರಹ ಹೋಮ, ಹಾಗೂ ಹಲವಾರು ಹೋಮ ನಡೆಯಲಿದ್ದು, ಸಂಜೆ 6.30 ರಿಂದ ಕಲಶಾರಾಧನೆ, ತತ್ವ ಕಲಾ ಪೂಜೆಗಳು, ಶಯ್ಯಾದಿವಾಸ, ನಿದ್ರಾಕಲಕ ಪೂಜೆ, ಪೀಠ ಪೂಜೆ, ರತ್ನನ್ಯಾಸ, ಅಷ್ಟಬಂಧ ಸ್ಥಾಪನೆ ಕಾರ್ಯ ನಡೆಯಲಿದೆ. ಸೆ . 1 ನೇ ಭಾನುವಾರ ಬೆಳಿಗ್ಗೆ 6 ರಿಂದ ಕಳಾನ್ಯಾಸ, ಪ್ರಾಣಪ್ರತಿಷ್ಠಾಪನೆ, ನೇತ್ರೋಲನ, ಶ್ರೀ ರುದ್ರಹೋಮ, ಕಲಶಾಭಿಷೇಕ ಬೆಳಿಗ್ಗೆ 7.15 ರವರೆಗೆ ಸಲ್ಲುವ ಶುಭ ಸಿಂಹ ಲಗ್ನದ ಶುಭ ಮುಹೂರ್ತದಲ್ಲಿ ಸಪರಿವಾರ ಸಹಿತವಾಗಿ ಶ್ರೀ ಗಂಗಮಾಳಮ್ಮ ಸಹಿತ ಶ್ರೀ ಮೈಲಾರಲಿಂಗೇಶ್ವರ ಸ್ವಾಮಿ ಪ್ರತಿಷ್ಠಾಪನೆ. ನಂತರ ರುದ್ರಹೋಮ, ಕಲಶಾಭಿಷೇಕ, ಪೂರ್ಣಾಹುತಿ, ಮಹಾಮಂಗಳಾರತಿ ತೀರ್ಥ ಪ್ರಸಾದ ವಿನಿಯೋಗವಿರುತ್ತದೆ.

ಸೆ. 1 ರಂದು ನಡೆಯುವ ಧಾರ್ಮಿಕ ಸಭೆಯ ಸಾನಿಧ್ಯವನ್ನು ಕಾಗಿನೆಲೆ ಕನಕ ಗುರುಪೀಠದಶ್ರೀನಿರಂಜನಾನಂದಸ್ವಾಮಿಜಿ ಹಾಗೂ ಮಾದಾರ ಚನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ, ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದಸ್ವಾಮೀಜಿವಹಿಸಲಿದ್ದಾರೆ. ಸಚಿವ ಡಿ.ಸುಧಾಕರ್, ಸಂಸದ ಗೋವಿಂದ ಎಂ.ಕಾರಜೋಳ ಮೈಲಾರಲಿಂಗೇಶ್ವರ ಸಮುದಾಯ ಭವನ ಉದ್ಘಾಟಿಸಲಿದ್ದಾರೆ. ದೇವಸ್ಥಾನದ ಸಂಸ್ಥಾಪಕರಾದ ದಿ॥ ನಿಶಾನಿ ಲಕ್ಷ್ಮಮ್ಮ, ದಿ। ನಿಶಾನಿ ಮಲ್ಲಪ್ಪ ಜಿ.ಎನ್. ಅವರ ಭಾವಚಿತ್ರಗಳನ್ನು ಶಾಸಕರಾದ ಗೋವಿಂದಪ್ಪ, ಟಿ.ರಘುಮೂರ್ತಿ ಅನಾವರಣಗೊಳಿಸಲಿದ್ದಾರೆ.

ಸಮಾರಂಭದ ಅಧ್ಯಕ್ಷತೆಯನ್ನು ಶಾಸಕ ಕೆ.ಸಿ.ವೀರೇಂದ್ರ ವಹಿಸಲಿದ್ದಾರೆ. ಆದಿಜಾಂಬವ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಬ್ರಾಹ್ಮಣ ಸಂಘ ಹಾಗೂ ಶ್ರೀ ಗಾಯಿತ್ರಿ ಕೋ.ಆಪರೇಟಿವ್ ಸೊಸೈಟಿ, ಅಧ್ಯಕ್ಷರಾದ ಪಿ.ಎಸ್. ಮಂಜುನಾಥ್, ಕೆ.ಸಿ.ನಾಗರಾಜ್, ಹೆಚ್.ಮಹದೇವಪ್ಪ, ನಗರಸಭೆ ಸದಸ್ಯರಾದ ಮೀನಾಕ್ಷಿ, ಶಶಿಧರ್, ಶ್ರೀ ರಂಗನಾಥ ಜ್ಯೂಯಲರ್ಸ್‌ನ ಕೆ.ಕೃಷ್ಣಪ್ಪ ಸೇರಿದಂತೆ ಇತರರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಸಮಿತಿ ಅಧ್ಯಕ್ಷ ಸುರೇಶ್ ಬಾಬು, ಗೌರವಾಧ್ಯಕ್ಷ ಕೃಷ್ಣಮೂರ್ತಿ, ಉಪಾಧ್ಯಕ್ಷ ವಿಜಯಕುಮಾರ್, ನಿರ್ದೇಶಕರಾದ ಶಿವಕುಮಾರ್, ನಾಗರಾಜ್ ಬೇದ್ರೆ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಆಗಸ್ಟ್ 28 ರಂದು ಸನ್ಮಾನ ಸಮಾರಂಭ, ಪ್ರತಿಭಾ ಪುರಸ್ಕಾರ, ವಾರ್ಷಿಕ ಮಹಾಸಭೆ

» ದಾವಣಗೆರೆ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯಿಂದ ಆಗಸ್ಟ್ 28 ರಂದು ಮಧ್ಯಾಹ್ನ 3 ಗಂಟೆಗೆ ನಗರದ ಹಳೇ ಕುಂದುವಾಡ ರಸ್ತೆ, ಬಂಟರ ಭವನದಲ್ಲಿ ನೂತನವಾಗಿ ಚುನಾಯಿತರಾದ ಲೋಕಸಭಾ ಸದಸ್ಯರಿಗೆ ಹಾಗೂ ವಿಧಾನಪರಿಷತ್ ಸದಸ್ಯರುಗಳಿಗೆ ಸನ್ಮಾನ ಸಮಾರಂಭ, ಹಾಗೂ 2023-24 ನೇ ಸಾಲಿನ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಹಾಗೂ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯನ್ನು ಆಯೋಜಿಸಲಾಗಿದೆ. ಕಾರ್ಯಕ್ರಮವನ್ನು ದಾವಣಗೆರೆ ದಕ್ಷಿಣ ವಿಧಾನಸಭಾ ಸದಸ್ಯರಾದ ಡಾ.ಶಾಮನೂರು ಶಿವಶಂಕರಪ್ಪ ಉದ್ಘಾಟಿಸುವರು. ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಅವರು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಪ್ರದಾನ ಮಾಡುವರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ವೀರೇಶ ಎಸ್.ಒಡೇನಪುರ ಅಧ್ಯಕ್ಷತೆ ವಹಿಸುವರು. ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ವಿಧಾನಪರಿಷತ್ ಶಾಸಕರಾದ ಡಿ.ಟಿ.ಶ್ರೀನಿವಾಸ್, ಎಸ್.ಎಲ್ ಭೋಜೇಗೌಡ, ಡಾ.ಧನಂಜಯ ಸರ್ಜಿ ಇವರಿಂದ ನೂತನ ಜನಪ್ರತಿನಿಧಿಗಳಿಗೆ ಗೌರವಿಸಿ ಸನ್ಮಾನಿಸುವರು. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯಾಧ್ಯಕ್ಷರಾದ ಸಿ.ಎಸ್.ಷಡಾಕ್ಷರಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡುವರು. ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್ ಉಪಸ್ಥಿತರಿರುವರು. ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಪ್ರಧಾನ ಕಾರ್ಯದರ್ಶಿ ಶ್ರೀನಿವಾಸ್ ತಿಮ್ಮೇಗೌಡ, ಕಾರ್ಯಾಧ್ಯಕ್ಷರಾದ ಮಲ್ಲಿಕಾರ್ಜುನ ಬಿ.ಬಳ್ಳಾರಿ, ರಾಜ್ಯ ಖಜಾಂಚಿ ಡಾ.ಎಸ್.ಸಿದ್ದರಾಮಣ್ಣ, ಗೌರವಾಧ್ಯಕ್ಷರಾದ ಬಿ.ಹೆಚ್.ವೆಂಕಟೇಶಯ್ಯ, ಹಿರಿಯ ಉಪಾಧ್ಯಕ್ಷರಾದ ಎಂ.ವಿ.ರುದ್ರಪ್ಪ, ಎಸ್ ಬಸವರಾಜು, ಆರ್. ಮೋಹನ್ ಕುಮಾರ್, ಎಸ್.ಸಿದ್ದೇಶ್ವರ, ಡಾ.ನೆಲ್ಕುದ್ರಿ ಸದಾನಂದಪ್ಪ ಪಾಲ್ಗೊಳುವರು.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಎಸ್.ಆರ್.ಎಸ್. ಸ್ವೀಕರಣಾ ಕೇಂದ್ರದಲ್ಲಿ ತುರ್ತಾಗಿ ಕಾರ್ಯವನ್ನು ಹಮ್ಮಿಕೊಂಡಿರುವುದರಿಂದ ಆಗಸ್ಟ್ 28 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ. ಎಫ್-10 ಸರಸ್ವತಿ ಫೀಡರ್ ವ್ಯಾಪ್ತಿಯ ಸರಸ್ವತಿ ಬಡಾವಣೆ ಎ, ಬಿ & ಸಿ ಬ್ಲಾಕ್, ಜೀವನ್ ಭೀಮಾನಗರ, ಚಿಕ್ಕಮಣಿ ದೇವರಾಜ್ ಅರಸ್ ಬಡಾವಣೆ, ಜಯನಗರ ಎ & ಬಿ ಬ್ಲಾಕ್, ಎಸ್.ಎಸ್. ಹೈಟೆಕ್ ಆಸ್ಪತ್ರೆ ರಸ್ತೆ, ಸಾಯಿಬಾಬ ದೇವಸ್ಥಾನದ ಸುತ್ತಮುತ್ತ, ಲಕ್ಷ್ಮೀ ಬಡಾವಣೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. ಎಫ್-11 ವಾಟರ್ ವರ್ಕ್ಸ್ ಫೀಡರ್ ವ್ಯಾಪ್ತಿಯ ದೂರದರ್ಶನ ಕೇಂದ್ರ, ಮಹಾನಗರ ಪಾಲಿಕೆ ನೀರು ಸರಬರಾಜು ಘಟಕಗಳು, ಸರ್ಕ್ಯೂಟ್ ಹೌಸ್, ಭೂಸೇನಾ ನಿಗಮ, ಜಿಲ್ಲಾ ಪಂಚಾಯತ್ ಕಛೇರಿ ಎಫ್-13 ಇಂಡಸ್ಟ್ರಿಯಲ್ ಏರಿಯ ಲೋಕಿಕೆರೆ ರಸ್ತೆ, ಸುಬ್ರಹ್ಮಣ್ಯನಗರ, ಎಸ್.ಎ .ರವೀಂದ್ರನಾಥ ಬಡಾವಣೆ ಮತ್ತು ಸುತ್ತ ಮುತ್ತ, ಎಫ್-14 ವಿದ್ಯಾನಗರ ಫೀಡರ್ ವ್ಯಾಪ್ತಿಯ ಶಿವಕುಮಾರಸ್ವಾಮಿ ಬಡಾವಣೆ 1 ಮತ್ತು 2ನೇ ಹಂತ, ಹದಡಿ ರಸ್ತೆ, ಸೇಂಟ್ ಜಾನ್ ಸ್ಕೂಲ್, ಐ.ಟಿ.ಐ. ಕಾಲೇಜು, ರಿಂಗ್ ರಸ್ತೆ, ಶ್ರೀನಿವಾಸ ನಗರ, ತರಳಬಾಳು ಬಡಾವಣೆ ಮತ್ತು ಸುತ್ತ ಮುತ್ತ ಪ್ರದೇಶಗಳು. ಎಫ್-15 ರಂಗನಾಥ ಫೀಡರ್ ವ್ಯಾಪ್ತಿಯ ಯುಬಿಡಿಟಿ ಲೇಡಿಸ್ ಹಾಸ್ಟೆಲ್, ಜಮುನಾ ವಾಣಿಜ್ಯ ಮಳಿಗೆ, ಸವಿತಾ ಹೋಟೆಲ್, ವಿದ್ಯಾನಗರ, ತರಳಬಾಳು ಬಡಾವಣೆ ಗಾಂಧಿ ಮೂರ್ತಿ ವೃತ್ತದಿಂದ ಈಶ್ವರ ಪಾರ್ವತಿ ದೇವಸ್ಥಾನ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳು. ಎಫ್-22 ಎಸ್ ಎಸ್ ಹೈಟೆಕ್ ಫೀಡರ್ ವ್ಯಾಪ್ತಿಯ ಎಸ್.ಓ.ಜಿ ಕಾಲೋನಿ ಎ, ಬಿ & ಸಿ ಬ್ಲಾಕ್, ಬುದ್ಧ, ಬಸವ ಭೀಮ ನಗರ , ಕರ್ನಾಟಕ ಬೀಜ ನಿಗಮ ಹಾಗೂ ಸುತ್ತಮತ್ತಲಿನ ಪ್ರದೇಶಗಳು. ಎಫ್-23 ವಿವೇಕಾನಂದ ಸ್ವಾಮಿ ಫೀಡರ್ ವ್ಯಾಪ್ತಿಯ ವಿವೇಕಾನಂದ ಬಡಾವಣೆ, ಎಲ್.ಐ.ಸಿ ಕಾಲೋನಿ, ಆಂಜನೇಯ ಬಡಾವಣೆ, ವಿನಾಯಕ ಬಡಾವಣೆ ಹಾಗೂ ಸುತ್ತಮುತ್ತಲಿನ ಪ್ರದೇಶಗಳು. 6ನೇ ಮತ್ತು 7ನೇ ಮೈಲಿಕಲ್ಲು, ಪಾಮೇನಹಳ್ಳಿ, ಬೆಳವನೂರು, ತುರ್ಚಗಟ್ಟ, ಹಳೇಬಿಸಲೇರಿ, ಹೊಸಬಿಸಲೇರಿ, ಜರಿಕಟ್ಟೆ, ಮುದಹದಡಿ, ಹಳೇಕುಂದವಾಡ, ಹೊಸಕುಂದವಾಡ, ಶಿರಮಗೊಂಡನಹಳ್ಳಿ, ನಾಗನೂರು, ಶಾಮನೂರು, ಜೆ.ಎಚ್.ಪಟೇಲ್ ಬಡಾವಣೆ ಸುತ್ತಮುತ್ತ ಹಾಗೂ ಇತರೆ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

#### ಬೆಂಕಿ ಹೆಚ್ಚಾದಂತೆ ಅಪಾಯವೂ ಸಹ ಹೆಚ್ಚು : ಜಾಣ್ಮೆಯಿಂದ ನಿಯಂತ್ರಣ ಸಾಧ್ಯ: ನಿಜಗುಣ

# ಅಗ್ನಿ ಅನಾಹುತ ನಿಯಂತ್ರಿಸಲು ಮುಂದಾಗಬೇಕು

» ಚಳ್ಳಕೆರೆ





ಇತ್ತೀಚಿನ ದಿನಗಳಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಿರಂತರವಾಗಿ ಅಗ್ನಿ ಆಕಸ್ಮಿಕಗಳು ನಡೆಯುತ್ತಿದ್ದು, ಇದನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಇಲ್ಲಿನ ಅಗ್ನಿಶಾಮಕ ಪಡೆದ ಲಿಟಲ್ ಪ್ಲವರ್ ಇಂಗ್ಲಿಷ್ ಮಿಡಿಯಾಂ ಪಬ್ಲಿಕ್ ಶಾಲೆಯಲ್ಲಿ ಅಗ್ನಿ ಅವಘಡದ ತಡೆಯುವ ಬಗ್ಗೆ ಪ್ರಾತ್ಯಕ್ಷತೆಯನ್ನು ನಡೆಸಿದರು.

ಅಗ್ನಿಶಾಮಕ ಪಡೆ ಅಧಿಕಾರಿ ನಿಜಗುಣ ಮತ್ತು ತಂಡ ಬೆಂಕಿ ಬಿದ್ದ ಸಂದರ್ಭದಲ್ಲಿ ಹಲವಾರು ರೀತಿಯ ಮುಂಜಾಗ್ರತಾ ಕ್ರಮಗಳನ್ನು ವಹಿಸಬೇಕಿದೆ.

ಬೆಂಕಿಯ ಜ್ವಾಲೆಗಳು ವ್ಯಾಪಿಸುವ ಸಂದರ್ಭದಲ್ಲಿ ಸುತ್ತಮುತ್ತಲ ವಸ್ತುಗಳನ್ನು ತೆರವುಗೊಳಿಸಬೇಕಲ್ಲದೆ, ಸಾಕಷ್ಟು ಪ್ರಮಾಣದಲ್ಲಿ ನಮ್ಮಲ್ಲಿರುವ ನೀರನ್ನು ನಿರಂತರವಾಗಿ ಅಗ್ನಿ ಸುಡುವ ಜಾಗದಲ್ಲಿ ಹಾಕಬೇಕಿದೆ.

ಅಗ್ನಿಶಾಮಕ ಪಡೆ ದಿನದ 24 ಗಂಟೆಗಳ ಕಾಲ ಕೇಂದ್ರದಲ್ಲಿ ಸಿದ್ದವಿರಲಿದೆ. ಇಂತಹ ಸಂದರ್ಭದಲ್ಲಿ ಕೂಡಲೇ ಅಗ್ನಿಶಾಮಕ ಪಡೆಗೆ ದೂರವಾಣಿ ಕರೆ ಮಾಡುವಂತೆ ಮನವಿ ಮಾಡಿದರು. ವಿದ್ಯಾರ್ಥಿಗಳು ಸಹ ಆಸಕ್ತಿಯಿಂದ ಪ್ರಾತ್ಯಕ್ಷತೆಯನ್ನು ವೀಕ್ಷಿಸಿದರು. ಸುಡುವ ಬೆಂಕಿಯ ಸುತ್ತಮುತ್ತಲು ಎಚ್ಚರಿಕೆಯಿಂದ ರಕ್ಷಣಾ ಕವಚದೊಂದಿಗೆ ಓಡಾಟ ನಡೆಸುವಂತೆ ಸಲಹೆ ನೀಡಲಾಯಿತು.

ಮುಖ್ಯೋಪಾಧ್ಯಾಯಿನಿ ಮಮತ ಮಾತನಾಡಿ, ಮಕ್ಕಳಿಗೆ ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಅಗ್ನಿಶಾಮಕ ಪಡೆಯ ಅಧಿಕಾರಿಗಳು, ಸಿಬ್ಬಂದಿ ವರ್ಗ ಬೆಂಕಿ ನಂದಿಸುವ, ನಿಯಂತ್ರಿಸುವ ಬಗ್ಗೆ ಸಾಕಷ್ಟು ಮಾಹಿತಿಯನ್ನು ನೀಡಿದ್ದಾರೆ. ವಿದ್ಯಾರ್ಥಿಗಳು ಸಹ ಆಸಕ್ತಿಯಿಂದ ಪ್ರಾತ್ಯಕ್ಷತೆಯ ಕಾರ್ಯವನ್ನು ಕಣ್ಣಾರೆ ಕಂಡು ಮನನ ಮಾಡಿಕೊಂಡಿದ್ದಾರೆ. ಬೆಂಕಿ ದುರಂತದ ಸಂದರ್ಭದಲ್ಲಿ ಎಚ್ಚರಿಕೆಯಿಂದ ಬೆಂಕಿ ನಿಯಂತ್ರಿಸುವ ಬಗ್ಗೆ ಹೆಚ್ಚಿನ ಮಾಹಿತಿಯನ್ನು ನೀಡಲಾಗಿದೆ. ಇಂತಹ ಪ್ರಾತ್ಯಕ್ಷತೆಯಿಂದ ವಿದ್ಯಾರ್ಥಿಗಳ ಬೌದ್ಧಿಕ ಮಟ್ಟ ಹೆಚ್ಚುತ್ತದೆ ಎಂದರು.

ಆಡಳಿತ ಮಂಡಳಿಯ ನಟರಾಜ, ಸಂತೋಷ್, ರೇಖಾ, ತಿಪ್ಪೇಸ್ವಾಮಿ, ಮಂಜುನಾಥರೆಡ್ಡಿ, ನಟರಾಜ್, ಮುಖ್ಯ ಶಿಕ್ಷಕ ಎನ್.ಮಂಜುನಾಥ, ಶಿಕ್ಷಕರಾದ ತಿಪ್ಪೇಸ್ವಾಮಿ, ಅಭಿಲಾಶ್, ಜಯಪ್ರಕಾಶ್, ಮಹಂತೇಶ್, ಹನುಮಂತರಾಯ, ಮಹಾಲಕ್ಷ್ಮಿ, ಲಕ್ಷ್ಮಿ, ಭಾರತಿ, ಹೀನಾ, ಗೌತಮಿ, ಕಮಲ, ರಾಧ, ಶಾರದ ಮುಂತಾದವರು ಭಾಗವಹಿಸಿದ್ದರು.

# ಭೇಟಿ ಬಚಾವೋ ಭೇಟಿ ಪಡಾವೋ ಕಾರ್ಯಗಾರ

#### ಅಂಗನವಾಡಿ ಕಾರ್ಯಕರ್ತೆಯರಿಗೆ ಐ.ಸಿ.ಡಿ.ಎಸ್ ಸೇವೆಗಳು, ಕಾರ್ಯಕ್ರಮ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕುರಿತು ಒಂದು ದಿನದ ಸಾಮರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಗಾರ

» ದಾವಣಗೆರೆ



ಭೂಮಿ ತಾಯಿ ಸಕಲ ಜೀವಿಗಳಿಗೆ ಬದುಕಲು ನೆಲ, ಜಲ, ಗಾಳಿ ನೀಡುತ್ತದೆ, ಇದೇ ಸ್ಥಾನ ಹೆಣ್ಣು ಮಕ್ಕಳಿಗಿದ್ದು ಹೆಣ್ಣು ಮಕ್ಕಳ ಶಿಕ್ಷಣ, ಸಂರಕ್ಷಣೆ ಎಲ್ಲರ ಜವಾಬ್ದಾರಿಯಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣವರ ತಿಳಿಸಿದರು.

ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಶಿಶು ಅಭಿವೃದ್ಧಿ ಯೋಜನೆ. ದಾವಣಗೆರೆ ಇವರುಗಳ ಸಂಯುಕ್ತಾಶ್ರಯದಲ್ಲಿ ಮಂಗಳವಾರ ತುಂಗಭದ್ರಾ ಸಭಾಂಗಣದಲ್ಲಿ ಹಮ್ಮಿಕೊಳ್ಳಾಗಿದ್ದ ಜಿಲ್ಲಾ ಮಟ್ಟದ ಭೇಟಿ ಬಚಾವೋ, ಭೇಟಿ ಪಡಾವೋ ಕಾರ್ಯಕ್ರಮದ ಅಂಗವಾಗಿ ಅಂಗನವಾಡಿ ಕಾರ್ಯಕರ್ತೆಯರಿಗೆ ಐ.ಸಿ.ಡಿ.ಎಸ್ ಸೇವೆಗಳು ಹಾಗೂ ಇಲಾಖಾ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಕುರಿತು ಒಂದು ದಿನದ ಸಾಮರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಗಾರದ ಉದ್ಘಾಟನೆ ನೇರವರಿಸಿ ಮಾತನಾಡಿದರು.

ಮಗು ತಾಯಿಯ ಗರ್ಭದಲ್ಲಿರುವಾಗ ಮತ್ತು ನಂತರ ಬೆಳವಣಿಗೆಯಾಗಲು ತಾಯಿಯ ಆರೈಕೆ ಅತ್ಯಗತ್ಯವಾಗಿದೆ. ಈ ಹಂತದಲ್ಲಿ ತಾಯಿಗೆ ಪೌಷ್ಠಿಕ ಆಹಾರ ಬಹಳ ಮುಖ್ಯವಾಗಿರುತ್ತದೆ. ಮಗು ಹುಟ್ಟುವ ಮುನ್ನ, ನಂತರದ ಬೆಳವಣಿಗೆ ಹಾಗೂ ತನ್ನ ವಿದ್ಯಾಭ್ಯಾಸ ಮಾಡಲು ತಾಯಿಯ ಶ್ರಮ ಸಾಕಷ್ಟಿರುತ್ತದೆ. ಎಲ್ಲಾ ಹಂತದಲ್ಲಿ ತಾಯಿ ಶ್ರಮ ಸಾಕಷ್ಟಿದ್ದು ಇದಕ್ಕಾಗಿಯೇ ಹೆಣ್ಣು ಮಕ್ಕಳ ಸಂರಕ್ಷಣೆ, ವಿದ್ಯಾಭ್ಯಾಸ ಮಾಡಿಸುವ ಮೂಲಕ ಕುಟುಂಬದ ಬೆಳವಣಿಗೆಗೆ ಸಹಕಾರಿಯಾಗಲಿದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಣಾಧಿಕಾರಿ ಸುರೇಶ್ ಬಿ.ಇಟ್ನಾಳ್ ಅಧ್ಯಕ್ಷತೆ ವಹಿಸಿ ಮಾತನಾಡಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಮಕ್ಕಳ ಆರೋಗ್ಯ, ಶಿಕ್ಷಣ ಹಾಗೂ ಸಾಮಾಜಿಕ ಪಿಡುಗುಗಳನ್ನು ತೊಡೆದು ಹಾಕುವಲ್ಲಿ ಬಹು ಮುಖ್ಯ ಕಾರ್ಯವನ್ನು ನಿಭಾಯಿಸುತ್ತಿದೆ. ಅದೇ ರೀತಿ ಪೋಕ್ಸೋ ಕಾಯ್ದೆ, ಬಾಲ್ಯ ವಿವಾಹ, ಬಾಲ ಕಾರ್ಮಿಕ ಪದ್ಧತಿ ವಿರುದ್ಧ ಹೋರಾಡುವ ಬಹು ದೊಡ್ಡ ಜವಾಬ್ದಾರಿ ನಿಮ್ಮ ಮೇಲಿದೆ. ಆದ್ದರಿಂದ ಇದನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಅನುಷ್ಟಾನ ಮಾಡಬೇಕು ಎಂದು ತಿಳಿಸಿದರು.

ಕಾರ್ಯಗಾರದಲ್ಲಿ ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ರಾಜಾನಾಯ್ಕ ಕೆ.ಎಸ್, ಹಾಗೂ ಜಿಲ್ಲೆಯ ಎಲ್ಲಾ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಮೇಲ್ವಿಚಾರಕರು, ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

### ಹೆದ್ದಾರಿ ಸಮಸ್ಯೆ ಕುರಿತು ಜಿಲ್ಲಾಧಿಕಾರಿ ಜೊತೆ ಶಾಸಕ ಬಸವರಾಜು ವಿ ಶಿವಗಂಗಾ ಸಭೆ



» ಚನ್ನಗಿರಿ

ಚಿತ್ರದುರ್ಗ-ಶಿವಮೊಗ್ಗ ರಾಷ್ಟ್ರೀಯ ಹೆದ್ದಾರಿ 369ರಲ್ಲಿನ ಸಮಸ್ಯೆಗಳ ಕುರಿತು ಶಾಸಕರಾದ ಬಸವರಾಜು ವಿ ಶಿವಗಂಗಾ ಹಾಗೂ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಅಧಿಕಾರಿಗಳೊಂದಿಗೆ ಸ್ಥಳ ಪರಿಶೀಲನೆ ನಡೆಸಿದರು. ಚನ್ನಗಿರಿ ಪಟ್ಟಣ, ದಿಗ್ಗೇನಹಳ್ಳಿ ಮತ್ತು ಅಜ್ಜಿಹಳ್ಳಿ ಮೂಲಕ ಮೂಲಕ ರಾಷ್ಟ್ರೀಯ ಹೆದ್ದಾರಿ ಹಾದು ಹೋಗಿದ್ದು, ಇಲ್ಲಿನ ನಿವಾಸಿಗಳಿಗೆ ಸಮಸ್ಯೆ ಕೂಡ ಉಂಟಾಗಿದೆ, ದಿಗ್ಗೇನಹಳ್ಳಿ ಗ್ರಾಮಕ್ಕೆ ಹೋಗಲು ಅಂಡರ್ ಪಾಸ್ ವ್ಯವಸ್ಥೆ ಇಲ್ಲದಿರುವುದು, ಚನ್ನಗಿರಿ ಪಟ್ಟಣ ಬಳಿ ನಿರ್ಮಾಣವಾಗುತ್ತಿರುವ ಹೊಸ ಬಡಾವಣೆಗಳಿಗೆ ಮತ್ತು ಅಜ್ಜಿಹಳ್ಳಿ ಸರ್ಕಾರಿ ಶಾಲೆಗೂ ಹೆದ್ದಾರಿ ನಿರ್ಮಾಣದಿಂದ ತೊಂದರೆ ಉಂಟಾಗಿದೆ. ಈ ಹಿನ್ನೆಲೆ ಜಿಲ್ಲಾಧಿಕಾರಿ ಡಾ. ಗಂಗಾಧರಸ್ವಾಮಿ ಮತ್ತು ಶಾಸಕರಾದ ಬಸವರಾಜು ವಿ ಶಿವಗಂಗಾ ಸ್ಥಳಗಳಿಗೆ ಹೆದ್ದಾರಿ ಪ್ರಾಧಿಕಾರ ಸೇರಿದಂತೆ ಇತರೆ ಇಲಾಖೆ ಅಧಿಕಾರಿಗಳ ತಂಡದೊಂದಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ದಿಗ್ಗೇನಹಳ್ಳಿ ಬಳಿ ಅಂಡರ್ ಪಾಸ್ ವ್ಯವಸ್ಥೆ ಇಲ್ಲದಿರುವ ಕಾರಣ ಪಟ್ಟಣಕ್ಕೆ ಹಾಗೂ ಇತರೆ ಊರುಗಳಿಗೆ ಹೋಗಲು ಸೂಕ್ತ ವ್ಯವಸ್ಥೆ ಇಲ್ಲ ಹಾಗೂ ಅಂಡರ್ ಪಾಸ್ ವ್ಯವಸ್ಥೆ ಇಲ್ಲದ ಕಾರಣ ಸಂಚಾರಕ್ಕೆ ತೀವ್ರ ತೊಂದರೆ ಉಂಟಾಗುತ್ತಿದೆ, ಈ ಕಾರಣ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಪರಿಶೀಲನೆ ಮಾಡಲಾಯಿತು. ಇನ್ನೂ ಅಜ್ಜಿಹಳ್ಳಿ ಸರ್ಕಾರಿ ಶಾಲೆ ಬಳಿ ಹೆದ್ದಾರಿ ಹಾದು ಹೋಗಿದ್ದು ಶಾಲಾ ಮಕ್ಕಳಿಗೂ ತೊಂದರೆ ಉಂಟಾಗುತ್ತಿದೆ. ಇನ್ನೂ ಚನ್ನಗಿರಿ ಪಟ್ಟಣ ಬಳಿ ನಿರ್ಮಾಣವಾಗುತ್ತಿರುವ ಲೇ ಔ□□ಗಳಿಗೂ ಸಮಸ್ಯೆ ಎದುರಾಗಿದೆ. ಇನ್ನೂ ಹೆಚ್ಚಿನ ಪರಿಹಾರಕ್ಕೆ ರೈತರು ಬೇಡಿಕೆ ಇಟ್ಟಿದ್ದಾರೆ ಈ ಕಾರಣ ಈ ಸಮಸ್ಯೆಗಳ ಪರಿಹಾರ ಸೂಚಿಸಲು ಪರಿಶೀಲನೆ ಮಾಡಲಾಯಿತು. ಬಳಿಕ ಆಡಳಿತ ಸೌಧದಲ್ಲಿ ಶಾಸಕರು ಮತ್ತು ಜಿಲ್ಲಾಧಿಕಾರಿ ಜಂಟಿಯಾಗಿ ಸಭೆ ನಡೆಸಿದರು. ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು, ಇಂಜಿನಿಯರ್ ಗಳು ಮತ್ತು ಪಿಡಬ್ಲ್ಯೂ ಸೇರಿದಂತೆ ಇತರೆ ಇಲಾಖೆ ಅಧಿಕಾರಿಗಳೊಂದಿಗೆ ಶಾಸಕರು ಮತ್ತು ಜಿಲ್ಲಾಧಿಕಾರಿಗಳು ಸುಧೀರ್ಘ ಚರ್ಚೆ ನಡೆಸಿದರು. ಸಾರ್ವಜನಿಕರಿಗೆ ಹೆದ್ದಾರಿ ನಿರ್ಮಾಣದಿಂದ ಸಮಸ್ಯೆ ಉಂಟಾಗಿದ್ದು, ಇದನ್ನು ಪರಿಹರಿಸಬೇಕಿದ್ದು, ಅಧಿಕಾರಿಗಳು ತಕ್ಷಣ ಈ ಬಗ್ಗೆ ಕ್ರಮ ಕೈಗೊಂಡು ಸಾರ್ವಜನಿಕರಿಗೆ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕೆಂದು ಶಾಸಕರು ಸೂಚಿಸಿದರು. ಈ ವೇಳೆ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಸೇರಿದಂತೆ ತಾಲ್ಲೂಕು ಮಟ್ಟದ ಅಧಿಕಾರಿ ವರ್ಗದವರು ಉಪಸ್ಥಿತರಿದ್ದರು.

### ಗಣೇಶ ಚತುರ್ಥಿ ಮತ್ತು ಈದ್ ಮಿಲಾದ್ ಸೌಹಾರ್ದ ಸಭೆ

» ದಾವಣಗೆರೆ

ಸೆಪ್ಟೆಂಬರ್ 7 ರಿಂದ ಗಣೇಶ ಚತುರ್ಥಿ ಹಬ್ಬ ಆಚರಣೆ ಮತ್ತು ಸೆ.16 ಅಥವಾ 17 ರಂದು ಈದ್ ಮಿಲಾದ್ ಆಚರಣೆಯ ಪ್ರಯುಕ್ತ ಶಾಂತಿ ಸುವ್ಯವಸ್ಥೆಗಾಗಿ ಆಗಸ್ಟ್ 28 ರಂದು ಬೆಳಿಗ್ಗೆ 10.30 ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ತುಂಗಭದ್ರಾ ಸಭಾಂಗಣದಲ್ಲಿ ವಿವಿಧ ಇಲಾಖೆ ಅಧಿಕಾರಿಗಳೊಂದಿಗೆ ನಾಗರೀಕ ಸೌಹಾರ್ದ ಸಭೆಯನ್ನು ಆಯೋಜಿಸಲಾಗಿದೆ ಎಂದು ಪೊಲೀಸ್ ಅಧೀಕ್ಷಕರಾದ ಉಮಾ ಪ್ರಶಾಂತ್ ತಿಳಿಸಿದ್ದಾರೆ.

### ಆಗಸ್ಟ್ 30 ರಂದು ಉದ್ಯೋಗಮೇಳ

» ದಾವಣಗೆರೆ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಮಾದರಿ ವೃತ್ತಿ ಕೇಂದ್ರ, ದಾವಣಗೆರೆ ಇವರ ವತಿಯಿಂದ ಆಗಸ್ಟ್ 30 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಕೊಠಡಿ ಸಂಖ್ಯೆ-51, ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಉದ್ಯೋಗಮೇಳವನ್ನು ಆಯೋಜಿಸಲಾಗಿದೆ. ಉದ್ಯೋಗಮೇಳದಲ್ಲಿ ಖಾಸಗಿ ಸಂಸ್ಥೆಗಳು ಭಾಗವಹಿಸುತ್ತಿದ್ದು, ತಮ್ಮ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ, ಡಿಪ್ಲೋಮ, ಎಎನ್‌ಎಮ್, ಜಿಎನ್‌ಎಮ್, ಬಿಎಸ್ಸಿ ನರ್ಸಿಂಗ್ ಪದವಿ ಮತ್ತು ಸ್ನಾತಕೋತ್ತರ ಪದವಿಯಲ್ಲಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಹೆಚ್ಚಿನ ಮಾಹಿತಿಗೆ: 7483808321, 08192-259446 ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

# ಸರ್ಕಾರ ಯಾವುದೇ ಪರೀಕ್ಷಾ ನಿಯಮ ರೂಪಿಸಿದರೂ, ಜಗ್ಗದೇ ಮಕ್ಕಳು ಪರೀಕ್ಷೆ ಎದುರಿಸುವಂತೆ ಅವರನ್ನು ಅಣಿಗೊಳಿಸಬೇಕು

» ಹೊಸದುರ್ಗ



ಶೈಕ್ಷಣಿಕ ವರ್ಷ ಮುಗಿಯುವುದರೊಳಗೆ ಪಠ್ಯಕ್ರಮ ಬೋಧನೆ ಮಾಡಬೇಕು. ಇಂದಿನಿಂದಲೇ ಶ್ರಮವಹಿಸಿ ಮಕ್ಕಳು ಕಲಿಕೆಯ ಬಗ್ಗೆ ಪ್ರೋತ್ಸಾಹ ನೀಡಬೇಕು. ಫಲಿತಾಂಶ ಕಡಿಮೆ ಬಂದಾಗ ಸಬೂಬು ಹೇಳದೆ, ಗಮನವಿಟ್ಟು ಕಲಿಸಿ, ಸರ್ಕಾರ ಯಾವುದೇ ಪರೀಕ್ಷಾ ನಿಯಮ ರೂಪಿಸಿದರೂ, ಜಗ್ಗದೇ ಮಕ್ಕಳು ಪರೀಕ್ಷೆ ಎದುರಿಸುವಂತೆ ಅವರನ್ನು ಅಣಿಗೊಳಿಸಬೇಕು ಎಂದು ಶಾಸಕ ಬಿ.ಜಿ. ಗೋವಿಂದಪ್ಪ ಶಿಕ್ಷಕರಿಗೆ ಸಲಹೆ ನೀಡಿದರು.

ಪ್ರೌಢಶಾಲಾ ಮುಖ್ಯೋಪಾಧ್ಯಾಯರ ಸಂಘ, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ವತಿಯಿಂದ ಪಟ್ಟಣದ ಸಿದ್ಧರಾಮೇಶ್ವರ ಸಮುದಾಯ ಭವನದಲ್ಲಿ ಆಯೋಜಿಸಿದ್ದ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ನಿವೃತ್ತ ನೌಕರರಿಗೆ ಸನ್ಮಾನ ಹಾಗೂ ಶೇ.100 ಫಲಿತಾಂಶ ಪಡೆದ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಶಿಕ್ಷಣದ ಸಂಪತ್ತು ಈ ದೇಶದ ಸಂಪತ್ತಿದ್ದಂತೆ. ಅದು ಹಿಂದುಳಿದರೇ, ದೇಶವೇ ಹಿಂದುಳಿದಂತೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ಶಿಕ್ಷಕರೂ ಉದಾಸೀನ ಮಾಡದೇ, ನಿಗಾವಹಿಸಿ ಅಚ್ಚುಕಟ್ಟಾಗಿ ಬೋಧನೆ ಮಾಡಿ ಎಂದರು.

ಸಾನಿಧ್ಯ ವಹಿಸಿದ್ದ ಭಗೀರಥ ಗುರುಪೀಠದ ಪುರುಷೋತ್ತಮಾನಂದ ಪುರಿ ಸ್ವಾಮೀಜಿ ಮಾತನಾಡಿ ಪ್ರತಿಭೆ ಯಾರ ಸ್ವತ್ತಲ್ಲ. ಅದಕ್ಕೆ ಜಾತಿ, ಧರ್ಮ, ಬಡವ, ಶ್ರೀಮಂತರೆಂಬ ಬೇಧವಿಲ್ಲ. ಗಮನವಿಟ್ಟು, ಸತತ ಪರಿಶ್ರಮದಿಂದ ಮಾತ್ರ ಸಾಧನೆ ಮಾಡಬಹುದು. ಹೆಚ್ಚು ಅಂಕಗಳಿಸಲು ವಿದ್ಯಾರ್ಥಿಗಳು ಶ್ರಮ ಪಟ್ಟಿರುತ್ತಾರೆ. ಅಂತಹ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರಗಳು ಸಂತಸ ನೀಡುತ್ತವೆ. ಇದೆ ರೀತಿ ಕಾರ್ಯಕ್ರಮಗಳು ಮುಂದುವರಿಯಲಿ ಎಂದು ಹೇಳಿದರು.'

ಸಿರಿಗೆರೆ ತರಳಬಾಳು ಜಗದ್ಗುರು ವಿದ್ಯಾಸಂಸ್ಥೆಯ ಆಡಳಿತಾಧಿಕಾರಿ ಹೆಚ್.ವಿ. ವಾಮದೇವಪ್ಪ ಉಪನ್ಯಾಸ ನೀಡಿದರು.

ಕ್ಷೇತ್ರಶಿಕ್ಷಣಾಧಿಕಾರಿ ಸೈಯದ್ ಮೋಸಿನ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಶಾಂತಪ್ಪ, ಪ್ರೌಢಶಾಲೆಯ ಮುಖ್ಯ ಶಿಕ್ಷಕರ ಸಂಘದ ಅಧ್ಯಕ್ಷ ಟಿ.ಶೇಖರಪ್ಪ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಜಯಣ್ಣ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಗಂಗಾಧರ್, ಸಂಘಟನಾ ಕಾರ್ಯದರ್ಶಿ ಶಾಂತಪ್ಪ, ಮಾಜಿ ಅಧ್ಯಕ್ಷ ಆರ್. ಲಕ್ಷ್ಮಯ್ಯ, ಸಹಶಿಕ್ಷಕರ ಸಂಘದ ಅಧ್ಯಕ್ಷ ಪ್ರಕಾಶ್ ಎನ್. ಓ, ಕಾರ್ಯದರ್ಶಿ ಬಿ. ಹರೀಶ್, ಮುಖ್ಯ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ನಾಗೇಂದ್ರಪ್ಪ, ಕಾರ್ಯದರ್ಶಿ ಹೆಚ್.ಟಿ. ರುದ್ರೇಶ್ ಸೇರಿದಂತೆ ಶಿಕ್ಷಕರುಗಳು ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T